ಸಂಪುಟ: 11 ಸಂಚಿಕೆ: 183 ಪುಟ: 4+2 ಬೆಲೆ : 3.00 ಮಂಗಳವಾರ, ಆಗಸ್ಟ್ 25, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 183 Pages : 4+2 Rate : 3.00 Tuesday, August 25, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## 7.82 ಲಕ್ಷದ ಕರಡು ಪಟ್ಟಿ ಪ್ರಕಟ | ಹೊಸದಾಗಿ ಹೆಸರು ಸೇರ್ಪಡೆಗೆ ಸೆ.23ರವರೆಗೆ ಅವಕಾಶ: ಡಿಸಿ ಶ್ರೀಧರ್ ಸೂಚನೆ

# 1.20 ಲಕ್ಷ ಮತದಾರರಿಗೆ ಕತ್ತರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ 65-ಶಿರಹಟ್ಟಿ (ಪ.ಜಾ), 66-ಗದಗ, 67-ರೋಣ ಹಾಗೂ 68-ನರಗುಂದ ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದ ಕರಡು ಮತದಾರರ ಯಾದಿಯನ್ನು ಆ.24ರಂದು ಪ್ರಕಟಿಸಲಾಗಿದೆ. ಮತದಾರರು ಕರಡು ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಪರಿಶೀಲಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಎಸ್‌ಐಆರ್ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಕರಡು ಮತದಾರರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಆ.24ರಿಂದ ಸೆ.23ರವರೆಗೆ ಅವಕಾಶವಿದೆ. ಭಾರತದಲ್ಲಿನ ಬೇರೆ ಯಾವುದೇ ಮತಕ್ಷೇತ್ರದ ಮತದಾರರ ಪಟ್ಟಿಯಲ್ಲಿ ನೋಂದಣಿಯಾಗದೇ ಇರುವ ಹಾಗೂ ಅ.1, 2026ಕ್ಕೆ 18 ವರ್ಷ ಪೂರ್ಣಗೊಳ್ಳುವವರು ನಮೂನೆ6ರಲ್ಲಿ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು.

2026ರ ಅರ್ಹತಾ ದಿನಾಂಕಗಳಾದ ಜ.1, ಏ.1 ಅಥವಾ ಜು.1ರಂದು 18 ವರ್ಷ ಪೂರ್ಣಗೊಳ್ಳುವವರೂ ಕರಡು ಮತದಾರರ ಪಟ್ಟಿ ಪ್ರಕಟಣೆಯ ದಿನದಿಂದ ನಮೂನೆ6ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ಆಯಾ ತ್ರೈಮಾಸಿಕಗಳಲ್ಲಿ ಪರಿಶೀಲಿಸಿ ನಿಯಮಾನುಸಾರ ನೋಂದಣಿ ಮಾಡಲಾಗುವುದು.



### ಕರಡು ಪಟ್ಟಿಯಲ್ಲಿ 7.82 ಲಕ್ಷ ಮತದಾರರು

**1,20,715 ಹೆಸರುಗಳನ್ನು ಕೈಬಿಟ್ಟ ಬಳಿಕ ಕರಡು ಮತದಾರರ ಪಟ್ಟಿಯಲ್ಲಿ 3,92,460 ಪುರುಷರು, 3,89,723 ಮಹಿಳೆಯರು ಹಾಗೂ 49 ತೃತೀಯಲಿಂಗಿ ಮತದಾರರು ಸೇರಿದಂತೆ ಒಟ್ಟು 7,82,232 ಮತದಾರರಿದ್ದಾರೆ.**

**ಜಿಲ್ಲೆಯಲ್ಲಿ ಆ.24ರಂತೆ ಒಟ್ಟು 983 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಜೂ.16ರಂದು 967 ಮತಗಟ್ಟೆಗಳಿದ್ದು, ಇದೀಗ 16 ಮತಗಟ್ಟೆಗಳನ್ನು ಹೆಚ್ಚುವರಿಯಾಗಿ ಸ್ಥಾಪಿಸಲಾಗಿದೆ.**

**ಮತದಾರರ ಪಟ್ಟಿಯಲ್ಲಿ 20,891 ಅಸಂಗತತೆ ಅಥವಾ ಅಸಮಂಜಸತೆ (ಅನಾಮಲೀಸ್) ಪ್ರಕರಣಗಳು ಹಾಗೂ 5,084 ಮ್ಯಾಪಿಂಗ್ ಲಿಂಕ್ ಆಗದ ಪ್ರಕರಣಗಳು ಪತ್ತೆಯಾಗಿದ್ದು, ಒಟ್ಟು 25,975 ಮತದಾರರಿಗೆ ನೋಟಿಸ್ ಹಂಚಿಕೆ ಮಾಡಬೇಕಾಗಿದೆ. ಸಂಬಂಧಪಟ್ಟ ಮತದಾರರು ಸೂಕ್ತ ದಾಖಲೆಗಳನ್ನು ಬಿಎಲ್‌ಒಗಳಿಗೆ ಒದಗಿಸಿದ ಬಳಿಕ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಕ್ರಮ ಕೈಗೊಳ್ಳಲಾಗುವುದು.**

**ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ಅರ್ಹ ನಾಗರಿಕನ ಮತವೂ ಮಹತ್ವದ್ದಾಗಿದೆ. ಆದ್ದರಿಂದ ಮತದಾರರು ತಮ್ಮ ಹೆಸರು, ವಿಳಾಸ ಸೇರಿದಂತೆ ಮತದಾರರ ಪಟ್ಟಿಯಲ್ಲಿರುವ ವಿವರಗಳನ್ನು ಸ್ವತಃ ಪರಿಶೀಲಿಸಿಕೊಳ್ಳಬೇಕು. ಯಾವುದೇ ಲೋಪ ಅಥವಾ ತಪ್ಪು ಕಂಡುಬಂದಲ್ಲಿ ನಿಗದಿತ ಅವಧಿಯೊಳಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಿ ಸರಿಪಡಿಸಿಕೊಳ್ಳಬೇಕು. ಅರ್ಹ ಮತದಾರರು ಯಾವುದೇ ಕಾರಣಕ್ಕೂ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಂಡಿದೆ.**

**- ಸಿ.ಎನ್.ಶ್ರೀಧರ್,** ಜಿಲ್ಲಾಧಿಕಾರಿ, ಗದಗ

### 1.20 ಲಕ್ಷ ಮತದಾರರ ಹೆಸರು ಕೈಬದಲು

**ಜೂ.16ರಂದು ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ನೋಂದಣಿಯಾಗಿದ್ದರು. ಎಸ್‌ಐಆರ್ ವಿಶೇಷ ಸಮಗ್ರ ಪರಿಷ್ಕರಣೆ ಸಂದರ್ಭದಲ್ಲಿ ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ಹಿಂದಿರುಗಿಸದ ಮತದಾರರ ಭೌತಿಕ ಪರಿಶೀಲನೆ ನಡೆಸಿದ್ದು, ಒಟ್ಟು 1,20,715 ಮತದಾರರನ್ನು ಎಎಸ್‌ಡಿಡಿಒ (ಗೈರುಹಾಜರಿ, ಸ್ಥಳಾಂತರ, ಮೃತ, ನಕಲು ಮತ್ತು ಇತರೆ) ಎಂದು ಗುರುತಿಸಲಾಗಿದೆ.**

**ಇವರ ಪೈಕಿ 5,192 ಮಂದಿ ಪತ್ತೆಯಾಗದ ಅಥವಾ ಗೈರುಹಾಜರಿರುವವರು, 71,280 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು, 30,318 ಮಂದಿ ಮೃತಪಟ್ಟವರು, 13,537 ಮಂದಿ ಈಗಾಗಲೇ ಮತದಾರರ ಪಟ್ಟಿಯಲ್ಲಿ ನೋಂದಣಿಯಾಗಿರುವವರು ಹಾಗೂ 388 ಮಂದಿ ಇತರೆ ವರ್ಗಕ್ಕೆ ಸೇರಿದವರಾಗಿದ್ದಾರೆ.**

**ಎಎಸ್‌ಡಿಡಿಒ ಮತದಾರರ ಪಟ್ಟಿಯು ಬಿಎಲ್‌ಒ ಅಥವಾ ಮತದಾರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಲಭ್ಯವಿದ್ದು, ಮುಖ್ಯ ಚುನಾವಣಾಧಿಕಾರಿಗಳ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗಿದೆ.**

ನಮೂನೆ6ರಲ್ಲಿ ಅರ್ಜಿ ಸಲ್ಲಿಸುವವರು ಘೋಷಣಾ ಪತ್ರ, ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಅರ್ಜಿಯಲ್ಲಿ ನಮೂದಿಸಿರುವ ವಿಳಾಸದಲ್ಲಿ ಸಾಮಾನ್ಯ ನಿವಾಸಿಯಾಗಿರುವುದಕ್ಕೆ ಸೂಕ್ತ ದಾಖಲೆ ಹಾಗೂ ವಯಸ್ಸಿನ ದಾಖಲೆಗಳನ್ನು ಸಲ್ಲಿಸಬೇಕು.

ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು ನಮೂನೆ7ರಲ್ಲಿ ಅರ್ಜಿ ಸಲ್ಲಿಸಬೇಕು. ನಿವಾಸ ಬದಲಾವಣೆ, ಮತದಾರರ ಪಟ್ಟಿಯಲ್ಲಿನ ನಮೂದುಗಳ ತಿದ್ದುಪಡಿ, ಯಾವುದೇ ತಿದ್ದುಪಡಿಯಿಲ್ಲದೆ ಬದಲಿ ಮತದಾರರ ಗುರುತಿನ ಚೀಟಿ (ಎಪಿಕ್) ಪಡೆಯುವುದು ಅಥವಾ ಅಂಗವಿಕಲ ವ್ಯಕ್ತಿ ಎಂದು ಗುರುತಿಸಲು ಮನವಿ ಸಲ್ಲಿಸುವುದಕ್ಕೆ ನಮೂನೆ 8 ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹಕ್ಕು ಮತ್ತು ಆಕ್ಷೇಪಣೆಗಳನ್ನು ECINET ಮೊಬೈಲ್ ಆ್ಯಪ್, voters.eci.gov.in ವೆಬ್‌ಸೈಟ್, ಸಂಬಂಧಪಟ್ಟ ಮತಗಟ್ಟೆಯ ಮತಗಟ್ಟೆ ಮಟ್ಟದ ಅಧಿಕಾರಿ (ಬಿಎಲ್‌ಒ), ಮತದಾರ ನೋಂದಣಾಧಿಕಾರಿ ಅಥವಾ ತಹಶೀಲ್ದಾರರ ಕಚೇರಿಯಲ್ಲಿ ಸಲ್ಲಿಸಬಹುದು.

ಆ.24ರಿಂದ ಸೆ.23ರವರೆಗೆ ಸ್ವೀಕರಿಸುವ ಅರ್ಜಿಗಳನ್ನು ನಿಯಮಾನುಸಾರ ವಿಲೇವಾರಿ ಮಾಡಿ, ಚುನಾವಣಾ ಆಯೋಗದ ನಿರ್ದೇಶನದಂತೆ ಅ.27ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು.

ಎಸ್‌ಐಆರ್ ಕುರಿತು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜಾಗೃತಿ ಪ್ರಚಾರ ಕೈಗೊಳ್ಳಲಾಗಿದೆ. ಅನಕ್ಷರಸ್ಥ ಮತದಾರರಿಗೆ ಬಿಎಲ್‌ಒಗಳು ಮತದಾರರ ಪಟ್ಟಿಯ ವಿವರಗಳನ್ನು ಓದಿ ತಿಳಿಸಿರುವುದಾಗಿ ಜಿಲ್ಲಾಧಿಕಾರಿ ಹೇಳಿದರು. ಜಿಲ್ಲೆಯಲ್ಲಿ 1,428 ಸೈನಿಕ ಮತದಾರರಿದ್ದಾರೆ.

ಈ ಸಂದರ್ಭದಲ್ಲಿ ವಿಧಾನಸಭಾ ಮತಕ್ಷೇತ್ರಗಳ ಮತದಾರರ ನೋಂದಣಾಧಿಕಾರಿಗಳಾದ ಗಂಗಪ್ಪ ಎಂ., ಬಸನಗೌಡ ಕೋಟೂರ, ನಂದಾ ಹಣಬರಟ್ಟಿ, ಎಸ್.ಡಿ. ಪಾಟೀಲ ಹಾಗೂ ಚುನಾವಣಾ ಶಾಖೆಯ ತಹಸೀಲ್ದಾರ್ ಸಂತೋಷ ಹಿರೇಮಠ ಉಪಸ್ಥಿತರಿದ್ದರು.

---

**ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.**

## ರಾಜಕೀಯ ಹೋರಾಟ ಜನಪರ ಸಮಸ್ಯೆಗಳಿಗೆ ಧ್ವನಿಯಾಗಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ಪ್ರತಿಭಟನೆ ವಿಶಿಷ್ಟ ಹಾಗೂ ವಿಭಿನ್ನವಾಗಿತ್ತು. ಆದರೆ ನಾಗೇಂದ್ರ ಅವರ ಮೇಲಿರುವ ಆರೋಪಗಳ ಸತ್ಯಾಸತ್ಯತೆ ತಿಳಿಯಲು ವಿವಿಧ ಸಂಸ್ಥೆಗಳು ತನಿಖೆ ನಡೆಸುತ್ತಿದ್ದು, ಅವುಗಳ ವರದಿ ಇನ್ನೂ ಹೊರಬಂದಿಲ್ಲ. ಹೀಗಿರುವಾಗ ರಾಜೀನಾಮೆಗೆ ಒತ್ತಾಯಿಸುವ ಹೋರಾಟದ ಜತೆಗೆ ಸ್ಥಳೀಯ ಸಮಸ್ಯೆಗಳ ಪರಿಹಾರಕ್ಕೂ ರಾಜಕೀಯ ಪಕ್ಷಗಳು ಆದ್ಯತೆ ನೀಡಬೇಕು ಎಂದು ಗದಗ ಜಿಲ್ಲೆಯ ಹಾಗೂ ಗದಗ-ಬೆಟಗೇರಿ ಅವಳಿ ನಗರದ ಅಭಿವೃದ್ಧಿ ಮತ್ತು ಸಾಮಾಜಿಕ ಚಿಂತಕ ವಿಶ್ವನಾಥ ಶೀರಿ ಅಭಿಪ್ರಾಯಪಟ್ಟಿದ್ದಾರೆ. ಗದಗ-ಬೆಟಗೇರಿ ನಗರಸಭೆಯ ಕೆಲವು ಸದಸ್ಯರು ನಕಲಿ ಸಹಿ ಮಾಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಅವರ ಸದಸ್ಯತ್ವ ಅನರ್ಹಗೊಂಡಿರುವ ಸಂದರ್ಭದಲ್ಲಿ, ಬಿಜೆಪಿ ತನ್ನ ಸದಸ್ಯರಿಂದ ರಾಜೀನಾಮೆ ಪಡೆದು ಅವಳಿ ನಗರದ ಅಭಿವೃದ್ಧಿಗೆ ಸಹಕರಿಸಬಹುದಿತ್ತೇ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮೂಡಿದೆ.ಪಕ್ಷದ ಜಿಲ್ಲಾಧ್ಯಕ್ಷರಿಗೆ ವಹಿಸಿರುವ ಜವಾಬ್ದಾರಿಯಂತೆ ಗದಗ ಜಿಲ್ಲೆ ಹಾಗೂ ಅವಳಿ ನಗರದ ಪ್ರಮುಖ ಸಮಸ್ಯೆಗಳನ್ನು ಕೈಗೆತ್ತಿಕೊಂಡು, ಪರಿಹಾರ ದೊರೆಯುವವರೆಗೆ ಹೋರಾಟ ನಡೆಸಿದರೆ ಜನರಿಗೆ ನೇರವಾಗಿ ಅನುಕೂಲವಾಗಲಿದೆ. ಅದೇ ರೀತಿ ಉಳಿದಿರುವ ಅವಧಿಯಲ್ಲಿ ಕಾನೂನಾತ್ಮಕ ಅಂಶಗಳನ್ನು ಪರಿಶೀಲಿಸಿ ಸುಗಮ ಆಡಳಿತಕ್ಕೆ ಅವಕಾಶ ಕಲ್ಪಿಸಬೇಕು. ಮತದಾರರು ಚಲಾಯಿಸಿರುವ ಮತಕ್ಕೆ ಗೌರವ ನೀಡಿ ಗದಗ-ಬೆಟಗೇರಿ ಅವಳಿ ನಗರದ ಅಭಿವೃದ್ಧಿಗೆ ಅಗತ್ಯವಿರುವ ಸ್ಥಳೀಯ ಆಡಳಿತ ಒದಗಿಸುವ ಜವಾಬ್ದಾರಿ ಎಲ್ಲ ರಾಜಕೀಯ ಪಕ್ಷಗಳ ಮೇಲಿದೆ ಎಂದು ವಿಶ್ವನಾಥ ಶೀರಿ ತಿಳಿಸಿದ್ದಾರೆ.

## ಗ್ರಾಮೀಣ ಅಂಚೆ ಸೇವಕರ 16 ಹುದ್ದೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಅಂಚೆ ಇಲಾಖೆಯ ಗದಗ ಅಂಚೆ ವಿಭಾಗದ ವ್ಯಾಪ್ತಿಯ ವಿವಿಧ ಅಂಚೆ ಕಚೇರಿಗಳಲ್ಲಿ ಖಾಲಿ ಇರುವ ಗ್ರಾಮೀಣ ಅಂಚೆ ಸೇವಕ (ಜಿಡಿಎಸ್), ಶಾಖಾ ಅಂಚೆ ಪಾಲಕ (ಬಿಪಿಎಂ) ಹಾಗೂ ಸಹಾಯಕ ಶಾಖಾ ಅಂಚೆ ಪಾಲಕ (ಎಬಿಪಿಎಂ) ಹುದ್ದೆಗಳಿಗೆ 10ನೇ ತರಗತಿ ಅಂಕಗಳ ಆಧಾರದ ಮೇಲೆ ನೇಮಕಾತಿ ನಡೆಯಲಿದ್ದು, ಒಟ್ಟು 16 ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ತಿಳಿಸಿದ್ದಾರೆ.

ಆ. 31ರಿಂದ ಸೆ. 19ರವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಸೆ. 9ರಿಂದ 21ರವರೆಗೆ ಶುಲ್ಕ ಪಾವತಿಸಬಹುದಾಗಿದೆ. ಪ್ರಕಟಣೆಯಲ್ಲಿ ಸೂಚಿಸಿರುವ ವೇಳಾಪಟ್ಟಿಯಂತೆ ಇಲಾಖೆಯ ಅಧಿಕೃತ ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಗದಗ ವಿಭಾಗೀಯ ಅಂಚೆ ಅಧೀಕ್ಷಕರ ಕಚೇರಿಯನ್ನು ಸಂಪರ್ಕಿಸಬಹುದು. ಅಂಚೆ ಇಲಾಖೆಯ ಅಧಿಕೃತ ನೇಮಕಾತಿ ಜಾಲತಾಣದಲ್ಲಿಯೂ ವಿವರಗಳನ್ನು ಪಡೆಯಬಹುದಾಗಿದೆ. ಅರ್ಹ ಅಭ್ಯರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಎಸ್.ಎಸ್. ಶಿರಹಟ್ಟಿ ಕೋರಿದ್ದಾರೆ.

## ಇಂದು ಜೇಸಿ ಫ್ರೀಡಂ ಕಪ್ ಫುಟ್ಬಾಲ್ ಪಂದ್ಯಾವಳಿ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜೇಸಿ ಹೈಸ್ಕೂಲ್ ಮೈದಾನದಲ್ಲಿ ಆ.25ರಂದು ಒಂಬತ್ತನೇ ವರ್ಷದ ಜೇಸಿ ಫ್ರೀಡಂ ಕಪ್ ಫುಟ್ಬಾಲ್ ಪಂದ್ಯಾವಳಿ ನಡೆಯಲಿದ್ದು, 15ರಿಂದ 20 ಶಾಲಾ ತಂಡಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಉಪ ಪೊಲೀಸ್ ಅಧೀಕ್ಷಕ ವಿದ್ಯಾನಂದ ನಾಯಕ ಪಂದ್ಯಾವಳಿಗೆ ಚಾಲನೆ ನೀಡಲಿದ್ದಾರೆ ಎಂದು ಜೇಸಿ ಪ್ರೌಢಶಾಲೆ ಅಧ್ಯಕ್ಷ ವಾಸಣ್ಣ ಕುರಡಗಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಪಂದ್ಯಾವಳಿಯ ಉದ್ಘಾಟನಾ ಪಂದ್ಯದಲ್ಲಿ ಬಾಲಕಿಯರ ತಂಡಗಳು ಸೆಣಸಲಿರುವುದು ವಿಶೇಷ. ಕೆಎಲ್‌ಇ ಪ್ರೌಢಶಾಲೆ ಹಾಗೂ ಜೇಸಿ ಪ್ರೌಢಶಾಲೆಯ ವಿದ್ಯಾರ್ಥಿನಿಯರ ನಡುವೆ ಸ್ನೇಹಪರ ಪಂದ್ಯ ನಡೆಯಲಿದೆ. ಇದರಿಂದ ಮುಂದಿನ ದಿನಗಳಲ್ಲಿ ಬಾಲಕಿಯರ ಫುಟ್ಬಾಲ್ ಕ್ರೀಡೆಗೆ ಮತ್ತಷ್ಟು ಉತ್ತೇಜನ ದೊರೆಯಲಿದೆ ಎಂದರು.

ವಿದ್ಯಾರ್ಥಿಗಳಲ್ಲಿ ಕ್ರೀಡಾ ಮನೋಭಾವ ಬೆಳೆಸುವುದು, ದೈಹಿಕ ಹಾಗೂ ಮಾನಸಿಕ ಸದೃಢತೆ ಹೆಚ್ಚಿಸುವುದು ಮತ್ತು ವಿವಿಧ ಶಾಲೆಗಳ ಮಕ್ಕಳಲ್ಲಿ ಸಹಕಾರ ಮನೋಭಾವ ಬೆಳೆಸುವ ಉದ್ದೇಶದಿಂದ 2016-17ರಲ್ಲಿ ಪಂದ್ಯಾವಳಿ ಆರಂಭಿಸಲಾಯಿತು. ಸತತ ಒಂಬತ್ತು ವರ್ಷಗಳಿಂದ ಪಂದ್ಯಾವಳಿ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಹೇಳಿದರು. ಸ್ವಾತಂತ್ರ್ಯದ ಸವಿಸ್ಮರಣೆ ಹಾಗೂ ಮಕ್ಕಳಲ್ಲಿ ರಾಷ್ಟ್ರೀಯ ಮನೋಭಾವ ಬೆಳೆಸುವ ಉದ್ದೇಶದಿಂದ ಆಗಸ್ಟ್‌ನಲ್ಲಿಯೇ ಪಂದ್ಯಾವಳಿ ಆಯೋಜಿಸಲಾಗುತ್ತಿದ್ದು, ಅದಕ್ಕೆ ಜೇಸಿ ಫ್ರೀಡಂ ಕಪ್ ಎಂದು ಹೆಸರಿಡಲಾಗಿದೆ. ಶಿಕ್ಷಣ ಇಲಾಖೆ ಹಾಗೂ ವಿವಿಧ ಶಾಲೆಗಳಿಂದ ಉತ್ತಮ ಸಹಕಾರ ದೊರೆಯುತ್ತಿದೆ ಎಂದರು. ಮೊದಲ ವರ್ಷ 11 ಶಾಲೆಗಳ ತಂಡಗಳು ಭಾಗವಹಿಸಿದ್ದವು. ಪ್ರತಿ ವರ್ಷ ತಂಡಗಳ ಸಂಖ್ಯೆ ಹೆಚ್ಚುತ್ತಿರುವುದು ಪಂದ್ಯಾವಳಿಯ ಯಶಸ್ಸಿಗೆ ಸಾಕ್ಷಿಯಾಗಿದೆ.

ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಗದು ಬಹುಮಾನ ನೀಡಲಾಗುತ್ತಿದೆ ಎಂದು ತಿಳಿಸಿದರು. ವಿಜೇತ ತಂಡಕ್ಕೆ ₹25 ಸಾವಿರ ನಗದು, ಆಕರ್ಷಕ ರೋಲಿಂಗ್ ಶೀಲ್ಡ್ ಹಾಗೂ ವಿನ್ನಿಂಗ್ ಟ್ರೋಫಿ, ರನ್ನರ್‌ಅಪ್ ತಂಡಕ್ಕೆ ₹12 ಸಾವಿರ ನಗದು ಹಾಗೂ ಟ್ರೋಫಿ ನೀಡಲಾಗುವುದು. ಅತ್ಯುತ್ತಮ ಗೋಲ್‌ಕೀಪರ್ ಮತ್ತು ಸ್ಟ್ರೈಕರ್‌ಗೆ ತಲಾ ₹2 ಸಾವಿರ ನಗದು, ಆಕರ್ಷಕ ಶೀಲ್ಡ್ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಸುದ್ದಿಗೋಷ್ಠಿಯಲ್ಲಿ ವೈಶಾಕ್ ಬಂಗಾರಶೆಟ್ಟರ, ಪ್ರಕಾಶ ಎಕ್ಕಾಬಕ್ಕಿ, ರಾಮಚಂದ್ರ ಮೋನೆ, ಫರ್ಹಾನಾ, ಜ್ಯೋತಿ ಹಾಗೂ ಶಿವಕುಮಾರ ಉಪಸ್ಥಿತರಿದ್ದರು.

### 35ನೇ ವಾರ್ಡ್‌ನಲ್ಲಿ Gen Z Voters and Citizens Forum ಅಭಿಯಾನಕ್ಕೆ ಉತ್ತಮ ಸ್ಪಂದನೆ

## ಭರವಸೆ ಬೇಡ, ಶಾಶ್ವತ ಪರಿಹಾರ ಬೇಕು

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ದಶಕಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂಬ ಆಗ್ರಹದೊಂದಿಗೆ Gen Z Voters and Citizens Forum ವತಿಯಿಂದ ಹಮ್ಮಿಕೊಂಡಿರುವ ರಕ್ತ ಸಹಿ ಅಭಿಯಾನಕ್ಕೆ ನಗರದ 35ನೇ ವಾರ್ಡ್‌ನಲ್ಲಿ ಯುವಕರು, ಮಹಿಳೆಯರು ಹಾಗೂ ನಾಗರಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

35ನೇ ವಾರ್ಡ್‌ನ ನಿವಾಸಿಗಳು ಸ್ವಯಂಪ್ರೇರಿತರಾಗಿ ಅಭಿಯಾನದಲ್ಲಿ ಪಾಲ್ಗೊಂಡು, ಗದಗ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು, ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು ಹಾಗೂ ಸಂಕಷ್ಟದಲ್ಲಿರುವ ರೈತರಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿ ರಕ್ತದ ಸಹಿ ಮೂಲಕ ತಮ್ಮ ಆಗ್ರಹವನ್ನು ವ್ಯಕ್ತಪಡಿಸಿದರು.

ಗದಗ-ಬೆಟಗೇರಿ ನಗರ ನಿವಾಸಿಗಳು ಹಲವು ವರ್ಷಗಳಿಂದ ಸಮರ್ಪಕ ಹಾಗೂ ನಿಯಮಿತ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದಾರೆ. ಕುಡಿಯುವ ನೀರು ಪ್ರತಿಯೊಬ್ಬ ನಾಗರಿಕನ ಮೂಲಭೂತ ಅವಶ್ಯಕತೆಯಾಗಿರುವ ಹಿನ್ನೆಲೆಯಲ್ಲಿ ತಾತ್ಕಾಲಿಕ ಕ್ರಮಗಳಿಗೆ ಸೀಮಿತವಾಗದೆ, ಮುಂದಿನ ಹಲವು ದಶಕಗಳ ಜನಸಂಖ್ಯೆ ಹಾಗೂ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಗದಗ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ರೂಪಿಸಿ, ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಬೇಕು ಎಂದು ಅಭಿಯಾನದಲ್ಲಿ ಆಗ್ರಹಿಸಲಾಯಿತು.

ಶಿಕ್ಷಣ ಪಡೆದ ಗದಗ ಜಿಲ್ಲೆಯ ಯುವಕರು ಉದ್ಯೋಗಕ್ಕಾಗಿ ಬೆಂಗಳೂರು, ಹುಬ್ಬಳ್ಳಿ ಸೇರಿದಂತೆ ವಿವಿಧ ನಗರಗಳಿಗೆ ವಲಸೆ ಹೋಗುವ ಪರಿಸ್ಥಿತಿಗೆ ಕಡಿವಾಣ ಹಾಕಬೇಕು. ಜಿಲ್ಲೆಯಲ್ಲಿ ಕೈಗಾರಿಕೆಗಳು, ಕೃಷಿ ಆಧಾರಿತ ಉದ್ಯಮಗಳು ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ಸ್ಥಾಪಿಸುವುದರ ಜೊತೆಗೆ ಹೊಸ ಹೂಡಿಕೆಗಳನ್ನು ಆಕರ್ಷಿಸಿ, ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ವಿಶೇಷ ಯೋಜನೆ ರೂಪಿಸಬೇಕು ಎಂಬುದು ಯುವಕರ ಪ್ರಮುಖ ಬೇಡಿಕೆಯಾಗಿದೆ.



### ರಕ್ತದ ಸಹಿಯಲ್ಲಿ ಮೊಳಗಿದ ಜನರ ಆಗ್ರಹ

**ನಮ್ಮ ರಕ್ತದ ಪ್ರತಿಯೊಂದು ಸಹಿಯೂ ಗದಗದ ಅಭಿವೃದ್ಧಿಗಾಗಿ. ನಮ್ಮ ಹೋರಾಟ ಶಾಶ್ವತ ನೀರಿಗಾಗಿ. ನಮ್ಮ ಧ್ವನಿ ಯುವಕರ ಉದ್ಯೋಗಕ್ಕಾಗಿ. ನಮ್ಮ ಆಗ್ರಹ ರೈತರ ಬದುಕಿಗಾಗಿ. ಗದಗದ ಅಭಿವೃದ್ಧಿ ನಮ್ಮ ಹಕ್ಕು; ನ್ಯಾಯ ಸಿಗುವವರೆಗೂ ಜನರ ಧ್ವನಿ ನಿಲ್ಲುವುದಿಲ್ಲ ಎಂದು ಸಂಘಟನೆ ತಿಳಿಸಿದೆ.**

ಗದಗದ ಯುವಶಕ್ತಿ ಉದ್ಯೋಗಕ್ಕಾಗಿ ಬೇರೆ ನಗರಗಳತ್ತ ಮುಖ ಮಾಡುವ ಪರಿಸ್ಥಿತಿ ಬಾರದಂತೆ, ಅವರ ಪ್ರತಿಭೆ ಹಾಗೂ ಪರಿಶ್ರಮಕ್ಕೆ ಜಿಲ್ಲೆಯಲ್ಲಿ ಅವಕಾಶ ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಬೇಕು ಎಂದು ಒತ್ತಾಯಿಸಲಾಯಿತು. ಇದೇ ವೇಳೆ ಮಳೆ ಕೊರತೆ, ಬೆಳೆ ನಷ್ಟ, ನೀರಾವರಿ ಸಮಸ್ಯೆ, ಹೆಚ್ಚುತ್ತಿರುವ ಕೃಷಿ ವೆಚ್ಚ ಹಾಗೂ ಆರ್ಥಿಕ ಸಂಕಷ್ಟದಿಂದ ಬಳಲುತ್ತಿರುವ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಆಗ್ರಹಿಸಲಾಯಿತು. ರೈತರ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸುವುದರ ಜೊತೆಗೆ ನೀರಾವರಿ ಸೌಲಭ್ಯ, ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ಹಾಗೂ ಕೃಷಿ ಅಭಿವೃದ್ಧಿಗೆ ದೀರ್ಘಕಾಲೀನ ಯೋಜನೆಗಳನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಲಾಯಿತು.

ಈ ರಕ್ತ ಸಹಿ ಅಭಿಯಾನ ಯಾವುದೇ ಪಕ್ಷ ಅಥವಾ ವೈಯಕ್ತಿಕ ಹಿತಾಸಕ್ತಿಗಾಗಿ ನಡೆಸುತ್ತಿರುವ ಹೋರಾಟವಲ್ಲ. ಗದಗದ ನೀರು, ಯುವಕರ ಭವಿಷ್ಯ ಹಾಗೂ ರೈತರ ಬದುಕಿಗಾಗಿ ನಡೆಯುತ್ತಿರುವ ಜನಪರ ಅಭಿಯಾನವಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

35ನೇ ವಾರ್ಡ್‌ನ ಯುವಕರು, ಮಹಿಳೆಯರು ಹಾಗೂ ನಾಗರಿಕರು ಸ್ವಯಂಪ್ರೇರಿತರಾಗಿ ಅಭಿಯಾನದಲ್ಲಿ ಭಾಗವಹಿಸಿರುವುದು ನಗರದ ಅಭಿವೃದ್ಧಿ ಕುರಿತು ಜನರಲ್ಲಿ ಮೂಡುತ್ತಿರುವ ಜಾಗೃತಿಗೆ ಸಾಕ್ಷಿಯಾಗಿದೆ. ಅಭಿಯಾನದಲ್ಲಿ ಪಾಲ್ಗೊಂಡು ಜನಪರ ಹೋರಾಟಕ್ಕೆ ಶಕ್ತಿ ತುಂಬಿದ 35ನೇ ವಾರ್ಡ್‌ನ ಯುವಕರು, ಮಹಿಳೆಯರು, ನಾಗರಿಕರು ಹಾಗೂ ಮುಖಂಡರಿಗೆ Gen Z Voters and Citizens Forum ಕೃತಜ್ಞತೆ ಸಲ್ಲಿಸಿದೆ.

## ಭಾರತ ಜೋಡೋಗೆ ಯುವಶಕ್ತಿ ಕೈಜೋಡಿಸಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಭಾರತ ಜೋಡೋ ಯುವ ಸಂಘಗಳ ಸ್ಥಾಪನೆಯು ಯುವ ಸಮುದಾಯದಲ್ಲಿ ರಾಷ್ಟ್ರೀಯ ಭಾವನೆ ಹಾಗೂ ಸಾಮಾಜಿಕ ಜಾಗೃತಿ ಮೂಡಿಸುವುದರ ಜೊತೆಗೆ ಸೌಹಾರ್ದತೆ ಮತ್ತು ಸೇವಾ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ. ಸಂಘಗಳ ಸ್ಥಾಪನೆಯಲ್ಲಿ ಜಿಲ್ಲೆಯ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು. ನಗರದ ಜಿಲ್ಲಾಡಳಿತ ಭವನದ ಕೇಸ್ವಾನ್ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಸೋಮವಾರ ನಡೆದ ಭಾರತ ಜೋಡೋ ಯುವ ಸಂಘಗಳ ಸ್ಥಾಪನೆ ಕುರಿತು ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯುವಜನರು ಸಮಾಜದ ಮುಖ್ಯವಾಹಿನಿಗೆ ಬಂದು ದೇಶದ ಅಭಿವೃದ್ಧಿ ಹಾಗೂ ಸಾಮಾಜಿಕ ಐಕ್ಯತೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಇಂತಹ ಸಂಘಟನೆಗಳು ಸಹಕಾರಿಯಾಗಲಿವೆ. ಗ್ರಾಮೀಣ ಹಾಗೂ ನಗರ ಪ್ರದೇಶಗಳ ಯುವಕರು ಸಂಘಟನಾತ್ಮಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದರು. ಯುವಜನರಲ್ಲಿ ನಾಯಕತ್ವ ಗುಣಗಳನ್ನು ಬೆಳೆಸಲು ಹಾಗೂ ಸಮಾಜದ ಅಭಿವೃದ್ಧಿಯಲ್ಲಿ ಅವರ ಪಾತ್ರವನ್ನು ಹೆಚ್ಚಿಸಲು ಈ ಸಂಘಗಳು ಉತ್ತಮ ವೇದಿಕೆಯಾಗಲಿವೆ. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಗದಿತ ಕಾಲಮಿತಿಯೊಳಗೆ ಸಂಘಗಳ ರಚನೆ ಪೂರ್ಣಗೊಳಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ತಾಲೂಕು ಮಟ್ಟದ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಇತರ ಸಂಬಂಧಪಟ್ಟ ಇಲಾಖೆಗಳ ಸಿಬ್ಬಂದಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬಂದು ಈ ಸಂಘಗಳ ಪ್ರಯೋಜನ ಪಡೆಯುವಂತೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ಗ್ರಾಮ ಹಾಗೂ ವಾರ್ಡ್ ಮಟ್ಟದಲ್ಲಿ ಯುವ ಸಂಘಗಳನ್ನು ರಚಿಸುವ ಪ್ರಕ್ರಿಯೆ, ಸಂಘಗಳ ಕಾರ್ಯವೈಖರಿ ಹಾಗೂ ಮುಂದಿನ ಚಟುವಟಿಕೆಗಳ ರೂಪುರೇಷೆಗಳ ಕುರಿತು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು.



ಯುವಕರು ದುಶ್ಚಟಗಳಿಂದ ದೂರ ಉಳಿದು, ರಚನಾತ್ಮಕ ಸಾಮಾಜಿಕ ಕಾರ್ಯಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಹಾಗೂ ಸಂಘಟಕರಿಗೆ ನಿರ್ದೇಶನ ನೀಡಿದರು.

**ಭಾರತ ಜೋಡೋ ಯುವ ಸಂಘಗಳ ಸ್ಥಾಪನೆಯಿಂದ ಯುವಜನರಲ್ಲಿ ರಾಷ್ಟ್ರೀಯ ಭಾವನೆ, ಸಾಮಾಜಿಕ ಜಾಗೃತಿ, ಸೌಹಾರ್ದತೆ ಹಾಗೂ ಸೇವಾ ಮನೋಭಾವ ಬೆಳೆಸಲು ಸಾಧ್ಯವಾಗಲಿದೆ. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಸಂಘಗಳ ಸ್ಥಾಪನೆಯಲ್ಲಿ ಪಾಲ್ಗೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು.**

**- ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ

ತಾಲೂಕು ಮಟ್ಟದ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಸಂಘಗಳ ರಚನೆ ಹಾಗೂ ಮುಂದಿನ ಚಟುವಟಿಕೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ, ಗದಗ ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಚ್.ಎಸ್. ಜಿನಗ, ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ತಹಸೀಲ್ದಾರ್ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಖಾಸಗಿ ಶಾಲೆಗಳ ಶುಲ್ಕಕ್ಕೆ ಕಡಿವಾಣ ಹಾಕಿ: ಸತೀಶ ಹುಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಖಾಸಗಿ ಶಿಕ್ಷಣ ಸಂಸ್ಥೆಗಳು ಕರ್ನಾಟಕ ಶಿಕ್ಷಣ ಕಾಯ್ದೆ1983ರ ಅಡಿಯಲ್ಲಿ ರೂಪಿಸಲಾಗಿರುವ ಎಲ್ಲ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಶಾಲೆಗಳಲ್ಲಿ ವಸೂಲಿ ಮಾಡುವ ಶುಲ್ಕಗಳ ಸಂಪೂರ್ಣ ವಿವರಗಳನ್ನು ಪಾಲಕರಿಗೆ ಸ್ಪಷ್ಟವಾಗಿ ತಿಳಿಯುವಂತೆ ಶಾಲಾ ಗೋಡೆಗಳ ಮೇಲೆ ದೊಡ್ಡ ಗಾತ್ರದ ನಾಮಫಲಕದಲ್ಲಿ ಪ್ರದರ್ಶಿಸಲು ಶಿಕ್ಷಣ ಇಲಾಖೆ ಆದೇಶಿಸಬೇಕು ಎಂದು ಡಿ.ಎಸ್.ಎಸ್. ಸಂಘಟನಾ ಸಂಚಾಲಕ ಸತೀಶ ಎಚ್. ಹುಲಿ ಒತ್ತಾಯಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು, ನಿಯಮಗಳನ್ನು ಮೀರಿ ಯಾವುದೇ ರೀತಿಯ ವಂತಿಗೆ ಅಥವಾ ಹೆಚ್ಚುವರಿ ಶುಲ್ಕ ಸಂಗ್ರಹಿಸಲು ಅವಕಾಶವಿಲ್ಲ. ಆದರೂ ಗದಗ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿಯೂ ಕೆಲವು ಖಾಸಗಿ ಶಾಲೆಗಳು ಪ್ರತಿವರ್ಷ ಮನಬಂದಂತೆ ಶುಲ್ಕ ಹೆಚ್ಚಳ ಮಾಡುತ್ತಿದ್ದು, ಶಿಕ್ಷಣವನ್ನು ವಾಣಿಜ್ಯ ಕ್ಷೇತ್ರವನ್ನಾಗಿ ಮಾಡಿಕೊಂಡು ಪಾಲಕರಿಂದ ವಿವಿಧ ರೂಪದಲ್ಲಿ ಹಣ ವಸೂಲಿ ಮಾಡುತ್ತಿವೆ ಎಂದು ಆರೋಪಿಸಿದ್ದಾರೆ. ಖಾಸಗಿ ಶಾಲೆಗಳ ಶುಲ್ಕ ಹೆಚ್ಚಳ ಹಾಗೂ ನಿಯಮಗಳ ಉಲ್ಲಂಘನೆ ಕುರಿತು ಶಿಕ್ಷಣ ಇಲಾಖೆ ಎಚ್ಚೆತ್ತುಕೊಂಡು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಶಾಲಾ ಶುಲ್ಕವನ್ನು ಪಾಲಕರಿಂದ ಆನ್‌ಲೈನ್ ಮೂಲಕ ಸಂಸ್ಥೆಯ ಬ್ಯಾಂಕ್ ಖಾತೆಗೆ ಮಾತ್ರ ಜಮೆ ಮಾಡಿಕೊಳ್ಳುವಂತೆ ಆದೇಶಿಸಬೇಕು ಎಂದು ಹಲವು ಬಾರಿ ಸಂಘಟನೆಗಳ ಮೂಲಕ ಮನವಿ ಸಲ್ಲಿಸಲಾಗಿದೆ. ಆದರೆ ಸ್ಥಳೀಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕೇವಲ ನೋಟಿಸ್ ನೀಡಿ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು ಬೇಸರದ ಸಂಗತಿ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕರ್ನಾಟಕ ಶಿಕ್ಷಣ ಕಾಯ್ದೆಯ ನಿಯಮ 13(2)(ಬಿ) ಅನ್ವಯ ಪ್ರವೇಶ ಪರೀಕ್ಷೆ ನಡೆಸಿ ವಿದ್ಯಾರ್ಥಿಗಳನ್ನು ತರಗತಿಗಳಿಗೆ ದಾಖಲಿಸಿಕೊಳ್ಳುವ ಸಂಸ್ಥೆಗಳಿಗೆ ದಂಡ ವಿಧಿಸಲು ಅವಕಾಶವಿದೆ. ಆದ್ದರಿಂದ ಯಾವುದೇ ಖಾಸಗಿ ಶಿಕ್ಷಣ ಸಂಸ್ಥೆಗಳು ನಿಯಮ ಉಲ್ಲಂಘಿಸಿ ಪ್ರವೇಶ ಪ್ರಕ್ರಿಯೆ ನಡೆಸದಂತೆ ಕ್ರಮ ಕೈಗೊಳ್ಳಬೇಕು. ಸರ್ಕಾರದ ನಿಯಮಗಳು ಹಾಗೂ ಸುತ್ತೋಲೆಗಳನ್ನು ಉಲ್ಲಂಘಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು ಎಂದು ಸತೀಶ ಎಚ್. ಹುಲಿ ಆಗ್ರಹಿಸಿದ್ದಾರೆ.

### ಇಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜುಲೈ 2026ರ ಅಂತ್ಯದವರೆಗೆ ಜಿಲ್ಲೆಯಲ್ಲಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನು ಆ.25ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಸಭೆಯಲ್ಲಿ ~~ಜಿಲ್ಲೆಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಪ್ರಗತಿ ಕುರಿತು~~ ಪರಿಶೀಲನೆ ನಡೆಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅನುದಾನ ಹಂಚಿಕೆಯಲ್ಲಿ ತಾರತಮ್ಯ ಆರೋಪ: ರಾಜು ಕುರುಡಗಿ ವಾಗ್ದಾಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ವಾರ್ಡ್‌ಗಳಿಗೆ ಅನುದಾನ ಹಂಚಿಕೆ ಮಾಡುವಲ್ಲಿ ಶಾಸಕ ಎಚ್.ಕೆ.ಪಾಟೀಲರು ತಾರತಮ್ಯ ಮಾಡುತ್ತಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದರು. ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕರ್ನಾಟಕ ಸರ್ಕಾರದ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಗದಗ-ಬೆಟಗೇರಿ ಅವಳಿ ನಗರದ 35 ವಾರ್ಡ್‌ಗಳಿಗೆ ಅನುದಾನ ಹಂಚಿಕೆ ಮಾಡುವ ಸಂದರ್ಭದಲ್ಲಿ ಕಾಂಗ್ರೆಸ್ ಸದಸ್ಯರು ಪ್ರತಿನಿಧಿಸುವ ವಾರ್ಡ್‌ಗಳಿಗೆ ಹೆಚ್ಚಿನ ಹಾಗೂ ಬಿಜೆಪಿ ಸದಸ್ಯರಿರುವ ವಾರ್ಡ್‌ಗಳಿಗೆ ಕಡಿಮೆ ಅನುದಾನ ನೀಡಲಾಗುತ್ತಿದೆ ಎಂದು ದೂರಿದರು. ಕಾಂಗ್ರೆಸ್ ಸದಸ್ಯರಿರುವ ವಾರ್ಡ್‌ಗಳಿಗೆ ತಲಾ ₹1 ಕೋಟಿ ಹಾಗೂ ಬಿಜೆಪಿ ಸದಸ್ಯರಿರುವ ವಾರ್ಡ್‌ಗಳಿಗೆ ₹50 ಲಕ್ಷದಷ್ಟು ಅನುದಾನ ನೀಡುವ ಮೂಲಕ ತಾರತಮ್ಯ ಎಸಗಲಾಗಿದೆ. ಇದರಿಂದ ಬಿಜೆಪಿ ಸದಸ್ಯರ ವಾರ್ಡ್‌ಗಳ ಮತದಾರರ ಆಶಯಗಳಿಗೆ ಅನ್ಯಾಯವಾಗುತ್ತಿದೆ. ಜನಪ್ರತಿನಿಧಿಗಳು ಯಾವುದೇ ಪಕ್ಷಕ್ಕೆ ಸೇರಿದವರಾಗಿದ್ದರೂ ಕ್ಷೇತ್ರದ ಎಲ್ಲ ವಾರ್ಡ್‌ಗಳ ಅಭಿವೃದ್ಧಿಗೆ ಸಮಾನ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು. ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಯಾವುದೇ ತಾರತಮ್ಯ ಮಾಡದೆ ಎಲ್ಲ ವಾರ್ಡ್‌ಗಳಿಗೂ ಸಮಾನವಾಗಿ ಅನುದಾನ ಹಂಚಿಕೆ ಮಾಡಲಾಗಿತ್ತು. ಆದರೆ ಪ್ರಸ್ತುತ ಶಾಸಕರು ಕಾಂಗ್ರೆಸ್ ಸದಸ್ಯರು ಪ್ರತಿನಿಧಿಸುವ ಹಲವು ವಾರ್ಡ್‌ಗಳಿಗೆ ವಿವಿಧ ಇಲಾಖೆಗಳ ಮೂಲಕ ಅನುದಾನ ಒದಗಿಸಿ ರಸ್ತೆ, ಚರಂಡಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಹಕಾರ ನೀಡುತ್ತಿದ್ದಾರೆ. ಬಿಜೆಪಿ ಸದಸ್ಯರಿರುವ ವಾರ್ಡ್‌ಗಳಿಗೆ ಅಗತ್ಯ ಅನುದಾನ ನೀಡದೆ ಅಭಿವೃದ್ಧಿ ಕಾರ್ಯಗಳನ್ನು ನಿರ್ಲಕ್ಷಿಸಲಾಗುತ್ತಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಲ್ಲಿಯೂ ವಾರ್ಡ್‌ವಾರು ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಿರುವುದು ಖಂಡನೀಯ. ಈ ಧೋರಣೆಯನ್ನು ಗದಗ-ಬೆಟಗೇರಿ ಅವಳಿ ನಗರದ ಜನತೆ ಗಮನಿಸುತ್ತಿದ್ದು, ಮುಂಬರುವ ಚುನಾವಣೆಯಲ್ಲಿ ತಕ್ಕ ಉತ್ತರ ನೀಡಲಿದ್ದಾರೆ ಎಂದು ರಾಜು ಕುರುಡಗಿ ಎಚ್ಚರಿಸಿದರು.

---

ಕ್ರಿಕೆಟ್‌ನಿಂದ ಉತ್ಸಾಹ, ಹುರುಪು ಹೆಚ್ಚಲಿ; ವೃತ್ತಿಯಲ್ಲೂ ಕ್ರೀಡಾ ಮನೋಭಾವ ಇರಲಿ: ಎಚ್.ಕೆ.ಪಾಟೀಲ

# ಮಾಧ್ಯಮ ಮಿತ್ರರ ಕ್ರೀಡಾಸಕ್ತಿ ಉತ್ತಮ ಬೆಳವಣಿಗೆ





**ವಿಜಯಸಾಕ್ಷಿ ಸುದ್ದಿ, ಗದಗ**

ಮಾಧ್ಯಮ ಕ್ಷೇತ್ರದವರು ಕ್ರಿಕೆಟ್ ಲೀಗ್‌ನಲ್ಲಿ ಉತ್ಸಾಹದಿಂದ ಭಾಗವಹಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ಕ್ರೀಡೆಯಲ್ಲಿ ತೊಡಗಿಸಿಕೊಂಡಾಗ ವಯಸ್ಸಿನ ಅಂತರವೇ ಕಾಣಿಸುವುದಿಲ್ಲ. ಕ್ರೀಡೆಯಿಂದ ಉತ್ಸಾಹ, ಹುರುಪು ಹೆಚ್ಚುತ್ತದೆ ಎಂದು ಮಾಜಿ ಸಚಿವ, ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ವ್ಹಿಡಿಎಸ್ ಮೈದಾನದಲ್ಲಿ ಆಯೋಜಿಸಿದ್ದ ಗದಗ ಮೀಡಿಯಾ ಕ್ರಿಕೆಟ್ ಲೀಗ್‌ನ ಫೈನಲ್ ಪಂದ್ಯಕ್ಕೆ ಟಾಸ್ ಮಾಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರಿಕೆಟ್ ಇತ್ತೀಚೆಗೆ ಹೆಚ್ಚು ಜನಪ್ರಿಯವಾಗುತ್ತಿದೆ. ಆಟಗಾರರು ಸಮವಸ್ತ್ರ ಧರಿಸಿ ಮೈದಾನಕ್ಕಿಳಿಯುವುದು ಆಟಗಾರರಿಗಷ್ಟೇ ಅಲ್ಲದೆ ಅವರ ಮಕ್ಕಳು ಹಾಗೂ ಮೊಮ್ಮಕ್ಕಳಿಗೂ ಸಂತಸ ನೀಡುತ್ತದೆ. ಕ್ರೀಡೆ ಮನರಂಜನೆಯ ಜೊತೆಗೆ ಆರೋಗ್ಯಕರ ಚಟುವಟಿಕೆಯೂ ಆಗಿದೆ. ಕ್ರೀಡೆಯ ಮೂಲಕ ಇನ್ನಷ್ಟು ಎತ್ತರಕ್ಕೆ ಬೆಳೆಯಲು ಎಲ್ಲರಿಗೂ ಅವಕಾಶವಿದೆ ಎಂದರು.

ಕ್ರಿಕೆಟ್ ಲೀಗ್ ಆಯೋಜಿಸಲು ಶ್ರಮಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಹಾಗೂ ಪದಾಧಿಕಾರಿಗಳನ್ನು ಅಭಿನಂದಿಸಿದರು.

ಕಾನಿಪ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಜಿಲ್ಲೆಯ ಕಾರ್ಯನಿರತ ಪತ್ರಕರ್ತರಿಗಾಗಿ ಜಿಲ್ಲಾ ಸಂಘದ ವತಿಯಿಂದ ಇದೇ ಮೊದಲ ಬಾರಿಗೆ ಕ್ರಿಕೆಟ್ ಲೀಗ್ ಆಯೋಜಿಸಲಾಗಿದೆ. ಲೀಗ್‌ನ ವಿಜೇತ ತಂಡಕ್ಕೆ ₹5,555 ನಗದು ಹಾಗೂ ಟ್ರೋಫಿ, ರನ್ನರ್ ಅಪ್ ತಂಡಕ್ಕೆ ₹3,333 ನಗದು ಹಾಗೂ ಟ್ರೋಫಿ ನೀಡಲಾಗುವುದು ಎಂದರು.

ನಾಲ್ಕೂ ತಂಡಗಳ ಮಾಲೀಕರು, ಸಂಘದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರ ಸಹಕಾರದಿಂದ ಕ್ರಿಕೆಟ್ ಲೀಗ್ ಯಶಸ್ವಿಯಾಗಿ ಆಯೋಜಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ, ರವಿಕಾಂತ ಅಂಗಡಿ, ದೇವಪ್ಪ ಲಿಂಗದಾಳ, ಕಾನಿಪ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅಶೋಕ ಮಂದಾಲಿ, ಸಿದ್ದು ಪಾಟೀಲ, ತಂಡಗಳ ಮಾಲೀಕರಾದ ಜಗದೀಶ್ ಎಸ್.ಪಿ., ಅಜಿತ್ ಹೊಂಬಾಳಿ, ಎಚ್.ಎಂ. ಶರೀಫನವರ್, ಆನಂದ ಸಾಲಿಗ್ರಾಮ, ಆನಂದಯ್ಯ ವಿರಕ್ತಮಠ, ಅನಂತ ಕಾರ್ಕಳ, ಟಿ.ಎನ್. ಬಾಂಡಗೆ, ಸುನಿಲ್ ತೆಂಬದಮನಿ, ಅನಿಲ್ ತೆಂಬದಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಜಿಲ್ಲೆಯ ಕಾರ್ಯನಿರತ ಪತ್ರಕರ್ತರಿಗಾಗಿ ಇದೇ ಮೊದಲ ಬಾರಿಗೆ ಕ್ರಿಕೆಟ್ ಲೀಗ್ ಆಯೋಜಿಸಲಾಗಿದೆ. ಎಲ್ಲ ತಂಡಗಳ ಮಾಲೀಕರು, ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರ ಸಹಕಾರದಿಂದ ಲೀಗ್ ಯಶಸ್ವಿಯಾಗಿದೆ.
> 
> **- ರಾಜು ಎಂ. ಹೆಬ್ಬಳ್ಳಿ,** ಜಿಲ್ಲಾಧ್ಯಕ್ಷ, ಕಾನಿಪ ಸಂಘ, ಗದಗ

> ಮೈದಾನದಲ್ಲಿ ಪತ್ರಕರ್ತರು ತೋರಿಸುವ ಕ್ರೀಡಾ ಮನೋಭಾವ ವೃತ್ತಿಯಲ್ಲೂ ಕಾಣಿಸಲಿ. ಸಮಾಜವನ್ನು ತಿದ್ದುವ ಬಹುದೊಡ್ಡ ಶಕ್ತಿಯಾಗಿರುವ ಮಾಧ್ಯಮ ಕ್ಷೇತ್ರದವರು ಕ್ರೀಡೆಯ ಮೂಲಕ ಇನ್ನಷ್ಟು ಉತ್ಸಾಹ ಮತ್ತು ಹುರುಪು ಪಡೆದುಕೊಳ್ಳಲಿ.
> 
> **- ಎಚ್.ಕೆ. ಪಾಟೀಲ,** ಶಾಸಕ

---

## ಈದ್ ಮಿಲಾದ್ ಶಾಂತಿಯುತ ಆಚರಣೆಗೆ ಕರೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸದಾ ಸಿದ್ಧವಾಗಿದ್ದು, ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದೆ ಶಾಂತಿ ಹಾಗೂ ಸೌಹಾರ್ದತೆಯಿಂದ ಈದ್ ಮಿಲಾದ್ ಹಬ್ಬ ಆಚರಿಸಬೇಕು ಎಂದು ನರೇಗಲ್ಲ ಠಾಣೆ ಪಿಎಸ್‌ಐ ಐಶ್ವರ್ಯ ನಾಗರಾಳ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಈದ್ ಮಿಲಾದ್ ಹಬ್ಬದ ಹಿನ್ನೆಲೆಯಲ್ಲಿ ಭಾನುವಾರ ಸಂಜೆ ನಡೆದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ನರೇಗಲ್ಲ ಪಟ್ಟಣ ಸೇರಿದಂತೆ ಠಾಣಾ ವ್ಯಾಪ್ತಿಯ ಎಲ್ಲ ಗ್ರಾಮಗಳಲ್ಲಿಯೂ ಹಿಂದೂ-ಮುಸ್ಲಿಂ ಬಾಂಧವರು ಒಗ್ಗಟ್ಟಿನಿಂದ ಹಬ್ಬ ಆಚರಿಸಬೇಕು. ಶಾಂತಿಗೆ ಭಂಗ ತರುವ ಯಾವುದೇ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಗೊಂದಲ ಅಥವಾ ಅಶಾಂತಿ ಸೃಷ್ಟಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ನರೇಗಲ್ಲ ಠಾಣೆ ವ್ಯಾಪ್ತಿಯ ಜನರು ಶಾಂತಿ ಮತ್ತು ಸೌಹಾರ್ದತೆಗೆ ಹೆಸರಾಗಿದ್ದಾರೆ. ಪಟ್ಟಣದಲ್ಲಿ ಈವರೆಗೆ ಯಾವುದೇ ಗಲಾಟೆ ನಡೆದಿಲ್ಲ. ಎಲ್ಲ ಹಬ್ಬಗಳ ಸಂದರ್ಭದಲ್ಲಿಯೂ ಸಾರ್ವಜನಿಕರು ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸರಿಗೆ ಸಹಕಾರ ನೀಡಿದ್ದಾರೆ. ಇದೇ ರೀತಿಯ ಸಹಕಾರವನ್ನು ಮುಂದುವರಿಸುವಂತೆ ಮನವಿ ಮಾಡಿದರು. ಸಭೆಯಲ್ಲಿ ಎ.ಎ. ನವಲಗುಂದ, ಎಂ.ಎಸ್. ಧಡೇಸೂರಮಠ, ನಿಂಗನಗೌಡ ಲಕ್ಕನಗೌಡ್ರ, ಮಲ್ಲಯ್ಯ ಗುಂಡಗೋಪುರಮಠ, ಈಶ್ವರ ಬೆಟಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪೇದೆ ಬಸವರಾಜ ಮಾಯಮ್ಮನವರ ನಿರ್ವಹಿಸಿದರು.

## ಇನ್ಮುಂದೆ ಬೆಳಗ್ಗೆ 9ಕ್ಕೇ ಅಂಚೆ ಸೇವೆ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಅಂಚೆ ವಿಭಾಗದ ವ್ಯಾಪ್ತಿಯಲ್ಲಿರುವ ಅಂಚೆ ಕಚೇರಿಗಳಲ್ಲಿ ಪ್ರತಿದಿನ ಬೆಳಗ್ಗೆ 9 ಗಂಟೆಯಿಂದ ಏಕರೂಪದ ವ್ಯವಹಾರ ಸಮಯ ಜಾರಿಗೆ ತರಲಾಗಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ತಿಳಿಸಿದ್ದಾರೆ.

ಹೊಸ ವ್ಯವಸ್ಥೆಯಿಂದ ಸಾರ್ವಜನಿಕರು ಬೆಳಗ್ಗೆ 9 ಗಂಟೆಯಿಂದಲೇ ಅಂಚೆ ಕಚೇರಿಗಳಿಗೆ ಭೇಟಿ ನೀಡಿ ವಿವಿಧ ಅಂಚೆ ಹಾಗೂ ಹಣಕಾಸು ಸೇವೆಗಳನ್ನು ಪಡೆಯಬಹುದಾಗಿದೆ. ಉಳಿತಾಯ ಬ್ಯಾಂಕ್ (POSB) ವ್ಯವಹಾರಗಳು, ಸ್ಪೀಡ್ ಪೋಸ್ಟ್, ಪಾರ್ಸೆಲ್ ಸೇರಿದಂತೆ ವಿವಿಧ ಅಂಚೆ ಲೇಖನಗಳ ಬುಕ್ಕಿಂಗ್, ಇ-ಪಾವತಿ ಸೇವೆಗಳು, ಅಂಚೆ ಜೀವ ವಿಮೆ (PLI/RPLI) ಪ್ರೀಮಿಯಂ ಪಾವತಿ ಸೇರಿದಂತೆ ವಿವಿಧ ಸೇವೆಗಳು ನಿಗದಿತ ಸಮಯದಿಂದಲೇ ಲಭ್ಯವಾಗಲಿವೆ.

ಅಂಚೆ ಕಚೇರಿಗಳ ವ್ಯವಹಾರದ ಸಮಯ ವನ್ನು ಏಕರೂಪಗೊಳಿಸುವುದರಿಂದ ಸಾರ್ವಜನಿಕರು ತಮ್ಮ ಅಗತ್ಯದ ಅಂಚೆ ಸೇವೆಗಳನ್ನು ಸುಸಂಘಟಿತವಾಗಿ ಪಡೆದುಕೊಳ್ಳಲು ಅನುಕೂಲವಾಗಲಿದೆ. ಅಲ್ಲದೆ, ಅಂಚೆ ಸೇವೆಗಳ ಗುಣಮಟ್ಟ ಹಾಗೂ ದಕ್ಷತೆ ಹೆಚ್ಚಿಸಲು ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದ್ದಾರೆ. ಸಾರ್ವಜನಿಕರು ಹಾಗೂ ಅಂಚೆ ಇಲಾಖೆಯ ಗ್ರಾಹಕರು ಬೆಳಗ್ಗೆ 9 ಗಂಟೆಯಿಂದ ಲಭ್ಯವಾಗುವ ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ ಮನವಿ ಮಾಡಿದ್ದಾರೆ.



## ಸಭಾಧ್ಯಕ್ಷ ಜಿ.ಎಸ್. ಪಾಟೀಲರಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ತಿಮ್ಮಾಪೂರ**

ರೋಣ ಮತಕ್ಷೇತ್ರದ ಶಾಸಕ ಹಾಗೂ ವಿಧಾನಸಭೆ ಸಭಾಧ್ಯಕ್ಷ ಜಿ.ಎಸ್. ಪಾಟೀಲರನ್ನು ತಿಮ್ಮಾಪೂರ ಗ್ರಾಮದ ಮುಖಂಡರು ಭೇಟಿ ಮಾಡಿ ಶಾಲು, ಹೂಗುಚ್ಛ ನೀಡಿ ಸನ್ಮಾನಿಸಿ, ಗ್ರಾಮದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡುವಂತೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಮಾತನಾಡಿ, ತಿಮ್ಮಾಪೂರ ಕೃಷಿ ಪ್ರಧಾನ ಗ್ರಾಮವಾಗಿದ್ದು, ಮೂಲಸೌಕರ್ಯಗಳ ಕೊರತೆಯಿಂದ ರೈತರು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ.

ಗ್ರಾಮದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಬೇಕು. ಸಭಾಧ್ಯಕ್ಷರು ವಿಶೇಷ ಮುತುವರ್ಜಿ ವಹಿಸಿ ಅಗತ್ಯ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಜಿ.ಎಸ್. ಪಾಟೀಲರು, ತಿಮ್ಮಾಪೂರ ಗ್ರಾಮದ ಅಭಿವೃದ್ಧಿಗೆ ಅಗತ್ಯವಿರುವ ಕಾಮಗಾರಿಗಳಿಗೆ ಹಂತ ಹಂತವಾಗಿ ಅನುದಾನ ಒದಗಿಸಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಬಾಳಪ್ಪ ಗಂಗರಾತ್ರಿ, ಶರಣಪ್ಪ ಜೋಗಿನ, ಶಿವಕುಮಾರ ಯತ್ನಟ್ಟಿ, ಭೀಮಪ್ಪ ರಾಮಜಿ, ರಾಜಾಸಾಬ್ ನಧಾಪ, ಹನುಮಂತ ರಾಮಜಿ, ರಫೀಕಸಾಬ ನಧಾಪ, ಕಪ್ಪತ್ತಪ್ಪ ಸೋಂಪೂರ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.



ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯಿಂದ ಅಮೃತ ಭೋಜನಜ್ಞಾನ ಸಿಂಚನ

## ವಿದ್ಯಾರ್ಥಿ ಜೀವನವೇ ಭವಿಷ್ಯ ರೂಪಿಸುವ ಪ್ರಮುಖ ಹಂತ



**ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾರ್ಥಿ ಜೀವನವು ವ್ಯಕ್ತಿಯ ಉತ್ತಮ ಭವಿಷ್ಯವನ್ನು ರೂಪಿಸುವ ಅತ್ಯಂತ ಮಹತ್ವದ ಹಂತವಾಗಿದ್ದು, ಸತ್ಯ, ಪ್ರಾಮಾಣಿಕತೆ, ಶಿಸ್ತು, ದಯೆ, ಸಹಕಾರ ಹಾಗೂ ಗೌರವದಂತಹ ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳು ಬದುಕು ರೂಪಿಸಿಕೊಳ್ಳಬೇಕು ಎಂದು ಭಾರತೀಯ ಶ್ರಮಿಕ ಕಾರ್ಮಿಕ ಕರ್ಮಚಾರಿ ಮಹಾಸಂಘದ ಗದಗ ಜಿಲ್ಲಾ ಅಧ್ಯಕ್ಷ ನಿಂಗಪ್ಪ ಕಟ್ಟಿಮನಿ ಹೇಳಿದರು.

ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆ ನಂ. 2ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಆಯೋಜಿಸಿದ್ದ ಅಮೃತ ಭೋಜನಜ್ಞಾನ ಸಿಂಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನೈತಿಕ ಮೌಲ್ಯಗಳು ವಿದ್ಯಾರ್ಥಿಗಳಲ್ಲಿ ಉತ್ತಮ ವ್ಯಕ್ತಿತ್ವ ಬೆಳೆಸುತ್ತವೆ. ಶರಣರ ವಚನಗಳು ಹಾಗೂ ಅವರ ಆದರ್ಶಗಳನ್ನು ಮಕ್ಕಳು ತಿಳಿದುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಈ ಮೂಲಕ ಆದರ್ಶಪ್ರಾಯ ವಿದ್ಯಾರ್ಥಿ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅತಿಥಿಯಾಗಿ ಆಗಮಿಸಿದ್ದ ಪ್ರಶಸ್ತಿ ವಿಜೇತ ಗಾಯಕಿ ಪದ್ಮಾ ಕಬಾಡಿ ಮಾತನಾಡಿ, ವಚನಗಳು ಹಾಡಲು ಸುಲಭವಾಗಿದ್ದು, ಅತ್ಯಂತ ಅರ್ಥಗರ್ಭಿತವಾಗಿವೆ. ಮಕ್ಕಳು ವಚನಗಳ ಅರ್ಥ ತಿಳಿದುಕೊಂಡು ಹಾಡುವ ರೂಢಿ ಬೆಳೆಸಿಕೊಳ್ಳಬೇಕು. ವಚನಗಳ ಸಂದೇಶವನ್ನು ಬದುಕಿನಲ್ಲಿ ಅಳವಡಿಸಿಕೊಂಡು ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ಕದಳಿಶ್ರೀ ವೇದಿಕೆ ವತಿಯಿಂದ ಪ್ರತಿವರ್ಷ ಶ್ರಾವಣ ಮಾಸದಲ್ಲಿ ಸರ್ಕಾರಿ ಶಾಲೆಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಆಹ್ವಾನಿಸಿ, ಮಕ್ಕಳಿಗೆ ಸಿಹಿಭೋಜನ ಉಣಬಡಿಸುವುದು ಹಾಗೂ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ ಎಂದರು. ಈ ಸೇವಾ ಕಾರ್ಯಕ್ಕೆ ಸಹಕರಿಸಿದ ಡಾ. ರಾಧಿಕಾ ಕುಲಕರ್ಣಿ, ಆಶಿಕಾ ಹಾಗೂ ಆಶಿಕ ಖತ್ರಿ, ಸುಮಾ ಪಾಟೀಲ ಮತ್ತು ವಾಣಿ ಅಬ್ಬಿಗೇರಿ (ಪಾಟೀಲ) ಅವರನ್ನು ಅಭಿನಂದಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಕಮಲಾಕ್ಷಿ ರೇಶ್ಮಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಕದಳಿಶ್ರೀ ವೇದಿಕೆ ವತಿಯಿಂದ ಉತ್ತಮ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶಿಕ್ಷಣ ಪ್ರೇಮಿಗಳು ಸಿಹಿಭೋಜನ ಹಾಗೂ ಕಲಿಕಾ ಸಾಮಗ್ರಿಗಳೊಂದಿಗೆ ಸರ್ಕಾರಿ ಶಾಲೆಗೆ ಆಗಮಿಸಿ ಮಕ್ಕಳಿಗೆ ಉಪಯುಕ್ತ ಮಾಹಿತಿ ನೀಡುತ್ತಿರುವುದು ಶ್ಲಾಘನೀಯ ಎಂದರು.

ವಿದ್ಯಾರ್ಥಿಗಳಾದ ಅಮೃತಾ ಮರಾಠಿ, ಕವನಾ ಬರಡಿ ಹಾಗೂ ಸಿಂಧೂ ಹರ್ತಿ ವಚನ ಪ್ರಾರ್ಥನೆ ಸಲ್ಲಿಸಿದರು.

ರೇಣುಕಾ ಪಾಟೀಲ ಹಾಗೂ ಸ್ನೇಹಾ ಜಡಿ ವಚನಗಳನ್ನು ಹಾಡಿದರು. ಎಸ್.ವಿ. ಇಂದಿರಾಬಾಯಿ ಸ್ವಾಗತಿಸಿದರು. ಪಿ.ಎಫ್. ನಾಗನೂರ ಪರಿಚಯಿಸಿದರು. ಗೌರಮ್ಮ ಕಮತರ ನಿರೂಪಿಸಿದರು. ಸಂಗಮ್ಮ ಅಲಗೂರ ವಂದಿಸಿದರು.

ಕಾರ್ಯಕ್ರಮದಲ್ಲಿ ಕಲ್ಪನಾ ಅರ್ಕಸಾಲಿ, ಹೊನ್ನಮ್ಮ ಹರಿಜನ, ಶಿಲ್ಪಾ ಕಮ್ಮಾರ, ಸಂಗೀತಾ ಬದಿ, ಗೀತಾ ಮಂಗಳೂರ, ದೀಪಾ ಬೆಟಗೇರಿ, ಲಕ್ಷ್ಮೀ ಜಡಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಸಿರವಾರ ಅತ್ಯಾಚಾರ-ಕೊಲೆ ಖಂಡಿಸಿ ಛಲವಾದಿ ಮಹಾಸಭಾದಿಂದ ಮನವಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನಲ್ಲಿ 18 ವರ್ಷದ ಯುವತಿ ಅಶ್ವಿನಿ ತಿಪ್ಪಾರೆಡ್ಡಿ ಮೇಲೆ ನಡೆದ ಅತ್ಯಾಚಾರ ಹಾಗೂ ಕೊಲೆ ಪ್ರಕರಣವನ್ನು ಖಂಡಿಸಿ ಗದಗ ಜಿಲ್ಲಾ ಛಲವಾದಿ ಮಹಾಸಭಾ ವತಿಯಿಂದ ಜಿಲ್ಲಾಧಿ ಕಾರಿಗಳ ಮೂಲಕ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮನವಿ ಸಲ್ಲಿಸಲಾಯಿತು.

ಬಹಿರ್ದೆಸೆಗೆ ತೆರಳಿದ್ದ ಸಂದರ್ಭದಲ್ಲಿ ಯುವತಿಯನ್ನು ನಾಲ್ವರು ದುಷ್ಕರ್ಮಿಗಳು ಹಿಂಬಾಲಿಸಿ ಅತ್ಯಾಚಾರ ಎಸಗಿದ್ದಲ್ಲದೆ, ಬಾವಿಗೆ ಎಸೆದು ಕೊಲೆ ಮಾಡಿದ್ದಾರೆ ಎನ್ನಲಾಗಿದ್ದು, ಈ ಅಮಾನವೀಯ ಘಟನೆಯಿಂದ ಇಡೀ ಸಮಾಜವೇ ತಲೆತಗ್ಗಿಸುವಂತಾಗಿದೆ. ಪ್ರಕರಣವನ್ನು ತೀವ್ರವಾಗಿ ಖಂಡಿಸಿದ ಮಹಾಸಭಾ, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿತು.

ರಾಜ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಟ್ಟೆಚ್ಚರ ವಹಿಸಬೇಕು. ಅತ್ಯಾಚಾರ, ಕೊಲೆ ಸೇರಿದಂತೆ ಮಹಿಳೆಯರ ಮೇಲಿನ ದೌರ್ಜನ್ಯಗಳಿಗೆ ಕಾರಣರಾಗುವವರಿಗೆ ಕಾನೂನಿನಡಿ ಮತ್ತಷ್ಟು ಕಠಿಣ ಶಿಕ್ಷೆ ವಿಧಿಸಬೇಕು. ತಪ್ಪಿತಸ್ಥರಿಗೆ ಯಾವುದೇ ರೀತಿಯ ಕಾನೂನು ಸಡಿಲಿಕೆ ಅಥವಾ ಅನುಕೂಲ ಕಲ್ಪಿಸಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.



ಅತ್ಯಾಚಾರ ಸಂತ್ರಸ್ತರಿಗೆ ಉಚಿತ ಕಾನೂನು ನೆರವು ಒದಗಿಸುವುದರೊಂದಿಗೆ, ತಪ್ಪಿತಸ್ಥರಿಗೆ ಶಿಕ್ಷೆಯಾಗುವವರೆಗೂ ಸಂತ್ರಸ್ತ ಕುಟುಂಬಕ್ಕೆ ಅಗತ್ಯ ಕಾನೂನು ರಕ್ಷಣೆ ನೀಡಬೇಕು ಎಂದು ಮಹಾಸಭಾ ಆಗ್ರಹಿಸಿದೆ.

ಜಿಲ್ಲಾ ಗೌರವಾಧ್ಯಕ್ಷ ಬಸವರಾಜ ಕಡೆಮನಿ, ಜಿಲ್ಲಾಧ್ಯಕ್ಷ ಆನಂದ ಶಿಂಗಾಡಿ, ಶಂಭು ಹುನಗುಂದ, ಅನಿಲ ಕಾಳೆ, ಮುತ್ತು ಬಿಳೆಯಲಿ, ದಸಂಸ ಅಂಬೇಡ್ಕರ್‌ವಾದ ಜಿಲ್ಲಾ ಸಂಚಾಲಕ ಬಾಲರಾಜ ಅರಬರ, ಸಹಸಂಚಾಲಕ ನಾಗರಾಜ ಗೋಕಾವಿ, ಪರಶು ಕಾಳೆ, ಮಂಜುನಾಥ ಹಗೆದಾಳ, ವಿನಾಯಕ ತಿಮ್ಮಾಪೂರ, ಬಸವರಾಜ ಬಿಳೆಯಲಿ, ಶ್ರೀಕಾಂತ ಮಳಲಿ, ರಾಘವೇಂದ್ರ ಮಿಟ್ಟಿ, ಶರೀಫ್ ಬಿಳೆಯಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭಾರತೀಯ ಯುವಕರ ಕಣ್ಮಣಿ ಭಗತ್ ಸಿಂಗ್

**ವಿಜಯಸಾಕ್ಷಿ ಸುದ್ದಿ, ಗದಗ**

ಬಾಲ್ಯದಲ್ಲಿಯೇ ದೇಶಪ್ರೇಮವನ್ನು ರಕ್ತಗತವಾಗಿ ಮೈಗೂಡಿಸಿಕೊಂಡು, ಭಾರತವನ್ನು ಬ್ರಿಟಿಷರ ಆಳ್ವಿಕೆಯಿಂದ ಮುಕ್ತಗೊಳಿಸಬೇಕೆಂಬ ಮಹದಾಸೆ ಹೊಂದಿದ್ದ ಯುವ ಶೂರ ಭಗತ್ ಸಿಂಗ್ ಅವರು ಭಾರತೀಯ ಯುವಕರ ಕಣ್ಮಣಿಯಾಗಿದ್ದರು ಎಂದು ಪ್ರಾಚಾರ್ಯ ಡಾ. ಗಂಗಾ ಪವಾರ ಹೇಳಿದರು.ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ಹೋರಾಟಗಾರರ ಸಂಸ್ಮರಣಾ ವಿಶೇಷ ಕಾರ್ಯಕ್ರಮದಲ್ಲಿ ಭಗತ್ ಸಿಂಗ್ ಕುರಿತು ಮಾತನಾಡಿ, ಅವರು ಕ್ರಾಂತಿಕಾರಿ ವಿಚಾರಗಳು ಹಾಗೂ ಇಂಕ್ವಿಲಾಬ್ ಜಿಂದಾಬಾದ್ ಘೋಷಣೆಯ ಮೂಲಕ ಯುವಕರಲ್ಲಿ ದೇಶಪ್ರೇಮದ ಜಾಗೃತಿ ಮೂಡಿಸಿದರು. ಅಲ್ಪವಯಸ್ಸಿನಲ್ಲಿಯೇ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣವನ್ನೇ ಬಲಿದಾನ ಮಾಡಿದ ಭಗತ್ ಸಿಂಗ್ ನಿಜಕ್ಕೂ ಯುವಕರ ಕಣ್ಮಣಿಯಾಗಿದ್ದರು ಎಂದರು.




ಕಾರ್ಯಕ್ರಮದಲ್ಲಿ ಬಿ.ಇಡಿ. ಪ್ರಶಿಕ್ಷಣಾರ್ಥಿಗಳು ಭಗತ್ ಸಿಂಗ್ ಅವರ ಜೀವನದ ಮಹತ್ವದ ಘಟನೆಗಳು ಹಾಗೂ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಅವರು ನೀಡಿದ ಕೊಡುಗೆಯ ಕುರಿತು ಮಾತನಾಡಿದರು.

ಪ್ರೊ. ಶ್ರೀ ವಿ.ಬಿ. ತಾಳಿ ಹಾಗೂ ಬಿ.ಎಂ. ಕರಿಬಿಷ್ಠಿ ಅವರು ಭಗತ್ ಸಿಂಗ್ ಅವರ ಜೀವನ, ಹೋರಾಟ ಹಾಗೂ ದೇಶಪ್ರೇಮದ ಕುರಿತು ವಿಚಾರ ಹಂಚಿಕೊಂಡರು.

ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ರುದ್ರೇಶ ಹಂಚಿನಾಳ ಪ್ರಾರ್ಥಿಸಿದರು. ಈಶಪ್ಪ ಚೌವ್ಹಾಣ್ ಸ್ವಾಗತಿಸಿದರು. ಸೋಫಿಯಾಬಾನು ನಿರೂಪಿಸಿದರು. ಭರತಗೌಡ ವಂದಿಸಿದರು.

## ಸಂಕ್ಷಿಪ್ತ ಸುದ್ದಿಗಳು

ಜಾನಪದ ಕಲೆ, ಸಾಹಿತ್ಯವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯ: ಎಂ.ಕೆ. ಬೇವಿನಕಟ್ಟಿ

# ಜಾನಪದ ಸಾಹಿತ್ಯ ನಮ್ಮ ಸಾಂಸ್ಕೃತಿಕ ಸಂಪತ್ತಿನ ಕಣಜ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜಾನಪದ ಸಾಹಿತ್ಯವು ನಮ್ಮ ಪ್ರಾಚೀನ ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ತಲೆಮಾರುಗಳಿಂದ ಉಳಿಸಿಕೊಂಡು ಬಂದಿರುವ ಸಾಂಸ್ಕೃತಿಕ ಸಂಪತ್ತಿನ ಕಣಜವಾಗಿದೆ. ಗ್ರಾಮೀಣ ಬದುಕಿನ ಸೊಗಡು, ನೋವುನಲಿವು, ಸಂಭ್ರಮ ಹಾಗೂ ಜೀವನಾನುಭವಗಳನ್ನು ಜಾನಪದ ಸಾಹಿತ್ಯ ಪ್ರತಿಬಿಂಬಿಸುತ್ತದೆ ಎಂದು ಎಂ.ಕೆ. ಬೇವಿನಕಟ್ಟಿ ಹೇಳಿದರು.

ಪಟ್ಟಣದ ಕನಕದಾಸ ಪದವಿ ಪೂರ್ವ ವಿದ್ಯಾಲಯ ಹಾಗೂ ಕನ್ನಡ ಜಾನಪದ ಸಾಹಿತ್ಯ ಪರಿಷತ್, ಗಜೇಂದ್ರಗಡ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಅಂತರರಾಷ್ಟ್ರೀಯ ಜಾನಪದ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಹಿಂದಿನ ಕಾಲದಲ್ಲಿ ಕೃಷಿ ಸೇರಿದಂತೆ ವಿವಿಧ ಕೆಲಸ ಮಾಡುವಾಗ ಜನರು ಜಾನಪದ ಹಾಡುಗಳನ್ನು ಹಾಡುತ್ತಿದ್ದರು.

ಹಂತಿ ಪದ, ಲಾವಣಿ, ಸೋಬಾನ ಪದ, ನಾಮಕರಣದ ಪದ ಸೇರಿದಂತೆ ಜನಜೀವನದ ವಿವಿಧ ಸಂದರ್ಭಗಳ ಹಾಡುಗಳು ನಮ್ಮ ಅಮೂಲ್ಯ ಸಾಂಸ್ಕೃತಿಕ ಸಂಪತ್ತಾಗಿವೆ.

ಜಾನಪದ ಸಾಹಿತ್ಯವನ್ನು ಕೇವಲ ಮನರಂಜನೆಯಾಗಿ ನೋಡದೆ, ಅದರಲ್ಲಿರುವ ಜೀವನಾನುಭವ ಹಾಗೂ ಸಾಮಾಜಿಕ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಬೇಕು. ಯುವಜನರು ಜಾನಪದ ಕಲೆ, ಸಾಹಿತ್ಯ ಮತ್ತು ಸಂಪ್ರದಾಯಗಳ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಪತ್ರಕರ್ತ ಈಶ್ವರ ಬೆಟಗೇರಿ ಮಾತನಾಡಿ, ಜಾನಪದವು ಜೀವಂತ ಭಾಷೆಯಾಗಿದ್ದು, ಗ್ರಾಮೀಣ ಜನರ ಬದುಕಿನ ನೈಜ ಚಿತ್ರಣವನ್ನು ಯಾವುದೇ ಕೃತಕತೆಯಿಲ್ಲದೆ ಕಟ್ಟಿಕೊಡುವ ಶಕ್ತಿ ಹೊಂದಿದೆ ಎಂದರು. ಜಾನಪದ ಗೀತೆ, ಕಥೆ, ಗಾದೆ, ಒಗಟು ಹಾಗೂ ಆಚರಣೆಗಳನ್ನು ದಾಖಲಿಸಿ ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಶಿವಾನಂದ ಗೋಗೇರಿ ವಹಿಸಿದ್ದರು. ಹುಚ್ಚೀರಪ್ಪ ಈಟಿ, ವೀರೇಶ ಜೋಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ವೀರೇಶ ಜೋಗಿ ನಿರೂಪಿಸಿದರು. ಮಾರುತಿ ವೆಂಕಟಾಪುರ ವಂದಿಸಿದರು. ಶಿಕ್ಷಕರು, ವಿದ್ಯಾರ್ಥಿಗಳು, ಜಾನಪದ ಸಾಹಿತ್ಯಾಸಕ್ತರು ಹಾಗೂ ಕನ್ನಡಾಭಿಮಾನಿಗಳು ಪಾಲ್ಗೊಂಡಿದ್ದರು.

# 2100 ಕಿ.ಮೀ. ಪಾದಯಾತ್ರೆ; ಕೇದಾರನಾಥ ದರ್ಶನ ಮಾಡಿದ ಲಕ್ಷ್ಮೇಶ್ವರದ ಯುವಕ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎದೆತುಂಬಿದ ಶಿವಭಕ್ತಿ, ಕಣ್ಣೆದುರು ಕೇದಾರನಾಥದ ದರ್ಶನದ ಗುರಿ.



ದಣಿವರಿಯದ ಹೆಜ್ಜೆಗಳು, ಮಳೆ-ಬಿಸಿಲು, ಗಾಳಿ, ಗುಡ್ಡ-ಕಣಿವೆಗಳ ದುರ್ಗಮ ಹಾದಿ ಹಾಗೂ ಆರೋಗ್ಯದ ಏರುಪೇರುಗಳನ್ನೂ ಲೆಕ್ಕಿಸದೆ 87 ದಿನಗಳ ಕಾಲ ಬರೋಬ್ಬರಿ 2100 ಕಿ.ಮೀ. ಕಾಲ್ನಡಿಗೆಯಲ್ಲಿ ಸಾಗಿ ಹಿಮಾಲಯದ ಕೇದಾರನಾಥ ತಲುಪಿ ಶಿವನ ದರ್ಶನ ಪಡೆದ ಲಕ್ಷ್ಮೇಶ್ವರದ ಯುವಕ ವಿಕಾಸ್ ಮಂಜುನಾಥ ಮಹಾಜನಶೆಟ್ಟರ ಅವರ ಭಕ್ತಿಯ ಪಾದಯಾತ್ರೆ ಇದೀಗ ಗಮನ ಸೆಳೆದಿದೆ.

ಇದು ಕೇವಲ ಪಾದಯಾತ್ರೆಯಲ್ಲ; ಭಕ್ತಿಯ ಬಲ, ಸಂಕಲ್ಪದ ಶಕ್ತಿ ಹಾಗೂ ಸಾಹಸದ ಸಂಗಮ. ಸಾಮಾನ್ಯವಾಗಿ ವಾಹನಗಳಲ್ಲಿ ಕ್ರಮಿಸುವ ದೂರವನ್ನು ಕಾಲ್ನಡಿಗೆಯಲ್ಲಿ ಕ್ರಮಿಸಿ ವಿಕಾಸ್ ಅಪರೂಪದ ಸಾಹಸ ಮೆರೆದಿದ್ದಾರೆ.

ಮೇ 13ರಂದು ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಕೇದಾರನಾಥದತ್ತ ಪಾದಯಾತ್ರೆ ಆರಂಭಿಸಿದ ವಿಕಾಸ್, ಪ್ರತಿದಿನ ಸರಾಸರಿ 25ರಿಂದ 30 ಕಿ.ಮೀ. ನಡೆದು ರಾಜ್ಯದಿಂದ ರಾಜ್ಯಕ್ಕೆ ಮುನ್ನಡೆದರು. ದಾರಿ ಬದಲಾದರೂ ಗುರಿ ಬದಲಾಗಲಿಲ್ಲ. ಹಾದಿ ಕಠಿಣವಾದರೂ ಸಂಕಲ್ಪ ಸಡಿಲವಾಗಲಿಲ್ಲ. ಪಾದಗಳಲ್ಲಿ ನೋವು, ದೇಹದಲ್ಲಿ ಆಯಾಸವಿದ್ದರೂ ಮನದಲ್ಲಿ ಮಾತ್ರ ಹರ ಹರ ಮಹಾದೇವ ಎಂಬ ಜಪ ಮುಂದುವರಿಯುತ್ತಿತ್ತು.

ಸುದೀರ್ಘ ಪಯಣದಲ್ಲಿ ಜ್ವರ, ತಲೆನೋವು ಸೇರಿದಂತೆ ಆರೋಗ್ಯ ಸಮಸ್ಯೆಗಳು ಎದುರಾದವು. ಮಳೆ-ಬಿಸಿಲಿನ ಹೊಡೆತ, ಅಪರಿಚಿತ ದಾರಿಗಳು ಹಾಗೂ ಗುಡ್ಡಗಾಡಿನ ಏರು-ಇಳಿಜಾರುಗಳು ದೈಹಿಕ ಸಾಮರ್ಥ್ಯವನ್ನು ಪರೀಕ್ಷಿಸಿದವು. ಆದರೆ ಶಿವನ ದರ್ಶನ ಮಾಡಲೇಬೇಕು ಎಂಬ ಒಂದೇ ಸಂಕಲ್ಪ ಎಲ್ಲ ನೋವು-ಆಯಾಸವನ್ನು ಮರೆಸಿತು.

ಯಾತ್ರೆಯ ದಾರಿಯಲ್ಲಿ ಪರಿಚಯವಿಲ್ಲದ ಹಲವರು ಆಶ್ರಯ, ಆಹಾರ ಹಾಗೂ ಅಗತ್ಯ ನೆರವು ನೀಡಿದರು. ಅಪರಿಚಿತರ ಆತ್ಮೀಯತೆ, ಭಕ್ತರ ಸಹಕಾರ ಹಾಗೂ ದಾರಿಯುದ್ದಕ್ಕೂ ಮೊಳಗಿದ ಶಿವನಾಮ ವಿಕಾಸ್ ಅವರ ಪಯಣಕ್ಕೆ ಮತ್ತಷ್ಟು ಚೈತನ್ಯ ತುಂಬಿತು.

ನೂರಾರು ಕಿಲೋಮೀಟರ್‌ಗಳ ಹೆಜ್ಜೆ ಹಾಗೂ ಸಾವಿರಾರು ಕ್ಷಣಗಳ ನಿರೀಕ್ಷೆಯ ಬಳಿಕ ಆಗಸ್ಟ್ 7ರಂದು ವಿಕಾಸ್ ಕೇದಾರನಾಥ ತಲುಪಿ ಶಿವನ ದರ್ಶನ ಪಡೆದರು. 87 ದಿನಗಳ ತಪಸ್ಸಿನ ಬಳಿಕ ದೊರೆತ ದರ್ಶನ ಅವರ ಪಾಲಿಗೆ ಮರೆಯಲಾಗದ ಕ್ಷಣವಾಯಿತು.

ಕೇದಾರನಾಥ ತಲುಪಿದ ಬಳಿಕ 25 ಕೆ.ಜಿ. ಅಕ್ಕಿ ಬಳಸಿ ಭಕ್ತರಿಗೆ ಪ್ರಸಾದ ವಿತರಿಸುವ ಮೂಲಕ ತಮ್ಮ ಯಾತ್ರೆಯ ಸಂತೋಷವನ್ನು ಇತರರೊಂದಿಗೆ ಹಂಚಿಕೊಂಡರು.

ಸುದೀರ್ಘ ಪಾದಯಾತ್ರೆ ಪೂರ್ಣಗೊಳಿಸಿ ಭಾನುವಾರ ಲಕ್ಷ್ಮೇಶ್ವರಕ್ಕೆ ಮರಳಿದ ವಿಕಾಸ್ ಅವರಿಗೆ ಹಿಂದೂ ಮಹಾಸಭಾ ಗಣಪತಿ ಮಂಡಳಿ, ಹಾವಳಿ ಆಂಜನೇಯ ದೇವಸ್ಥಾನ ಸಮಿತಿ ಸೇರಿದಂತೆ ವಿವಿಧ ಸಂಘಟನೆಗಳು, ಜನಪ್ರತಿನಿಧಿಗಳು, ಬಂಧುಗಳು ಹಾಗೂ ಗೆಳೆಯರ ಬಳಗದ ವತಿಯಿಂದ ಮೆರವಣಿಗೆಯೊಂದಿಗೆ ಅದ್ದೂರಿ ಸ್ವಾಗತ ನೀಡಲಾಯಿತು. ಹರ ಹರ ಮಹಾದೇವ ಘೋಷಣೆಗಳ ನಡುವೆ ವಿಕಾಸ್ ಅವರನ್ನು ಅಭಿನಂದಿಸಿ, ಅವರ ಸಾಹಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಾಯಿತು.

ವಿಕಾಸ್ ಅವರ ಪಾದಯಾತ್ರೆ ಕೇವಲ ಕೇದಾರನಾಥ ತಲುಪಿದ ಕಥೆಯಲ್ಲ; ಗುರಿ ದೊಡ್ಡದಾಗಿದ್ದರೆ ಹೆಜ್ಜೆಗಳು ಚಿಕ್ಕದಾಗಿದ್ದರೂ ಪರವಾಗಿಲ್ಲ, ಆದರೆ ಅವು ನಿಲ್ಲಬಾರದು ಎಂಬ ಸಂದೇಶ ಸಾರುವ ಸಾಹಸಗಾಥೆಯಾಗಿದೆ. ದೈವಭಕ್ತಿ, ಆತ್ಮವಿಶ್ವಾಸ, ಶಿಸ್ತು ಹಾಗೂ ಅಚಲ ಸಂಕಲ್ಪದಿಂದ ಮುನ್ನಡೆದರೆ ಅಸಾಧ್ಯವೆನಿಸುವ ಗುರಿಯನ್ನೂ ಸಾಧಿಸಬಹುದು ಎಂಬುದನ್ನು ವಿಕಾಸ್ ತಮ್ಮ 2100 ಕಿ.ಮೀ. ಪಾದಯಾತ್ರೆಯ ಮೂಲಕ ತೋರಿಸಿಕೊಟ್ಟಿದ್ದಾರೆ ಎಂದು ಮಾಜಿ ಶಾಸಕ ರಾಮಣ್ಣ ಲಮಾಣಿ ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಯವಾಗುತ್ತಿರುವ ಜನಪದ ಕಲೆ, ಆಟಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ: ಎಚ್.ಕೆ. ಪಾಟೀಲ

# ಜನಪದದ ಬೇರು ಕಳಚದಿರಲಿ



> ನಮ್ಮ ಮೂಲ ಜನಪದ ಸಂಸ್ಕೃತಿಯ ವೈಭವ ಮಾಯವಾಗುತ್ತಿರುವುದು ಆತಂಕ ಮೂಡಿಸಿದೆ. ಮುಂದಿನ ಪೀಳಿಗೆಗೆ ಜನಪದ ಕಲೆಗಳನ್ನು ಪರಿಚಯಿಸಿ, ಉಳಿಸಿ ಬೆಳೆಸುವ ಕೆಲಸ ಹಿರಿಯ ಕಲಾವಿದರಿಂದ ಆಗಬೇಕು. ಇದಕ್ಕೆ ಅಗತ್ಯ ಸಹಕಾರವೂ ದೊರೆಯಬೇಕು.
> **- ಎಚ್.ಕೆ. ಪಾಟೀಲ**, ಶಾಸಕ

**ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ನಾಡಿನ ಜನಪದ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿ ಕೇವಲ ಹಿಂದಿನ ಪೀಳಿಗೆಯ ನೆನಪುಗಳಾಗಿ ಉಳಿಯದೆ, ಮುಂದಿನ ತಲೆಮಾರಿನ ಬದುಕಿನ ಭಾಗವಾಗಬೇಕು ಎಂಬ ಆಶಯದೊಂದಿಗೆ ಗದಗದಲ್ಲಿ ವಿಶ್ವ ಜಾನಪದ ದಿನಾಚರಣೆಯನ್ನು ಆಚರಿಸಲಾಯಿತು.

ನಗರದ ಎ.ಎಸ್.ಎಸ್. ವಾಣಿಜ್ಯ ಮಹಾವಿದ್ಯಾಲಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ತಂಜಾವೂರು ಹಾಗೂ ಎ.ಎಸ್.ಎಸ್. ವಾಣಿಜ್ಯ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಪಂಚಂ... ಪಗಡಂ... ಜಾನಪದ ಆಟ-ನೃತ್ಯ ಸಂಭ್ರಮಾಚರಣೆ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಎಚ್.ಕೆ. ಪಾಟೀಲ, ಜಗತ್ತಿನಲ್ಲೇ ವಿಶಿಷ್ಟ ಜಾನಪದ ಕಲೆ ಮತ್ತು ಸಂಸ್ಕೃತಿಯನ್ನು ಹೊಂದಿರುವ ನಾವು ಇಂದು ಅವುಗಳನ್ನು ಮರೆಯುತ್ತಿರುವುದು ವಿಷಾದನೀಯ. ಸ್ವಾತಂತ್ರ್ಯೋತ್ತರ ಪೀಳಿಗೆ ನಮ್ಮ ಮೂಲ ಕಲೆಗಳತ್ತ ಹೆಚ್ಚಿನ ಒಲವು ಬೆಳೆಸಿಕೊಳ್ಳಬೇಕಾಗಿತ್ತು. ಆದರೆ ಪಾಶ್ಚಾತ್ಯ ಸಂಸ್ಕೃತಿಯತ್ತ ಹೆಚ್ಚಿನ ಒಲವು ತೋರಿದ್ದರಿಂದ ಉತ್ತರ ಕರ್ನಾಟಕದ ಜನಪದ ಕಲೆ ಮತ್ತು ಸಾಹಿತ್ಯ ನಿರೀಕ್ಷಿತ ಮಟ್ಟದಲ್ಲಿ ಬೆಳವಣಿಗೆ ಕಾಣಲಿಲ್ಲ ಎಂದರು.

ನಮ್ಮ ಮೂಲ ಕಲೆಗಳನ್ನು ಉತ್ತೇಜಿಸುವ ಕೆಲಸ ಈಗ ಪ್ರಮುಖ ಆದ್ಯತೆಯಾಗಬೇಕು. ಜನಪದ ಅಕಾಡೆಮಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಈ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದು ಎಚ್.ಕೆ. ಪಾಟೀಲ ಹೇಳಿದರು.

ಮುಂಡರಗಿಯ ಸಾಹಿತಿ ಡಾ. ನಿಂಗು ಸೊಲಗಿ ಜಾನಪದ ಆಟಗಳ ಕುರಿತು ಉಪನ್ಯಾಸ ನೀಡಿದರು. ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ನಮ್ರತಾ ಎನ್. ಅಕಾಡೆಮಿಯ ಕಾರ್ಯಚಟುವಟಿಕೆಗಳನ್ನು ವಿವರಿಸಿ, ಇಂದಿನ ತಲೆಮಾರಿಗೆ ಮೂಲ ಜನಪದ ಆಟಗಳನ್ನು ಪರಿಚಯಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮರೆಯಾಗುತ್ತಿರುವ ಹಗ್ಗ ಜಗ್ಗಾಟ, ಸರ್ಕಲ್ ಕೋ-ಕೋ, ಕುಂಟೆಬಿಲ್ಲೆ, ಆಣಿಕೀರ, ಚಿಣಿಪಣಿ, ಕೆರೆ ದಡ ಸೇರಿದಂತೆ ವಿವಿಧ ಜಾನಪದ ಆಟಗಳನ್ನು ವಿದ್ಯಾರ್ಥಿಗಳಿಗೆ ಆಡಿಸಲಾಯಿತು. ಅಪರೂಪವಾಗುತ್ತಿರುವ ಗ್ರಾಮೀಣ ಆಟಗಳಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು ಹೊಸ ಅನುಭವದೊಂದಿಗೆ ಸಂಭ್ರಮಿಸಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿಲ್ಲಾ ಕನ್ನಡ ಅಧ್ಯಾಪಕರ ಸಂಘದ ಅಧ್ಯಕ್ಷ ಪ್ರೊ. ಶಿವಾನಂದ ಕೊರವರ, ಹಿರಿಯ ಸಾಂಸ್ಕೃತಿಕ ಚಿಂತಕ ಡಾ. ಜಿ.ಬಿ. ಪಾಟೀಲ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಮೆಹಬೂಬ ಕಿಲ್ಲೇದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಲಾವಿದರಾದ ಯಲ್ಲಪ್ಪ ಡಕ್ಕಣ್ಣವರ, ಬಸವರಾಜ ಜಕ್ಕಮ್ಮನವರ, ಯಲ್ಲಪ್ಪ ಚಂದಣ್ಣವರ, ಸಂಕಪ್ಪ ಹುಲ್ಲೂರ, ದುರ್ಗಮ್ಮ ಮಾದರ, ಈರಣ್ಣ ಕಬ್ಬಿಣದ ಹಾಗೂ ಪ್ರಕಾಶ ಕುರುಬರ ಅವರನ್ನು ಸನ್ಮಾನಿಸಲಾಯಿತು.

ಕಾಲೇಜು ವಿದ್ಯಾರ್ಥಿಗಳ ಕನ್ನಡ ಬಳಗದವರು ನಾಡಗೀತೆ ಹಾಡಿದರು. ಬಸವರಾಜ ಈರಣ್ಣವರ ತಂಡ ಪ್ರಾರ್ಥಿಸಿತು. ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ ಸ್ವಾಗತಿಸಿದರು. ಪ್ರೊ. ಬಾಹುಬಲಿ ಜೈನರ್ ನಿರೂಪಿಸಿದರು. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಶಂಕ್ರಣ್ಣ ಸಂಕಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜಯ ಕಿರೇಸೂರ ವಂದಿಸಿದರು.

ಗುಣಮಟ್ಟದ ರಸ್ತೆಚರಂಡಿ ನಿರ್ಮಾಣಕ್ಕೆ ಒತ್ತು: ಶಾಸಕ ಡಾ. ಎಚ್.ಕೆ. ಪಾಟೀಲ ಹೇಳಿಕೆ

# ಅವಳಿ ನಗರದ ಅಭಿವೃದ್ಧಿಗೆ ₹8.75 ಕೋಟಿ ಕಾಮಗಾರಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ಧವಾಗಿದ್ದು, ನಗರದ ಸರ್ವಾಂಗೀಣ ಪ್ರಗತಿಗೆ ವೇಗ ನೀಡಲಾಗುತ್ತಿದೆ ಎಂದು ಶಾಸಕ ಡಾ. ಎಚ್.ಕೆ. ಪಾಟೀಲ ಹೇಳಿದರು.

ಶನಿವಾರ ಅವಳಿ ನಗರದ ವಿವಿಧ ವಾರ್ಡ್‌ಗಳಲ್ಲಿ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಹಾಗೂ ನಗರಸಭೆ ಅನುದಾನದಡಿ ಕೈಗೆತ್ತಿಕೊಳ್ಳಲಾಗಿರುವ ಒಟ್ಟು ₹8.75 ಕೋಟಿ ವೆಚ್ಚದ ರಸ್ತೆ, ಚರಂಡಿ ಹಾಗೂ ಪ್ರಮುಖ ಸಿವಿಲ್ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸಾರ್ವಜನಿಕರ ದೈನಂದಿನ ಸಂಚಾರಕ್ಕೆ ಅನುಕೂಲವಾಗುವಂತೆ ಗುಣಮಟ್ಟದ ರಸ್ತೆ ಹಾಗೂ ಸುಸಜ್ಜಿತ ಚರಂಡಿ ವ್ಯವಸ್ಥೆ ನಿರ್ಮಿಸಲಾಗುತ್ತಿದೆ. ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಗುಣಮಟ್ಟದಿಂದ ಪೂರ್ಣಗೊಳಿಸಿ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ಬೆಟಗೇರಿ ಭಾಗದ ಪ್ರಮುಖ ಏಳು ವಾರ್ಡ್‌ಗಳಲ್ಲಿ ತಲಾ ₹1.25 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಲ್ಲಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ತಲಾ ₹1 ಕೋಟಿ ಹಾಗೂ ನಗರಸಭೆ ಅನುದಾನದಡಿ ₹25 ಲಕ್ಷ ಸೇರಿದೆ.

ಬೆಟಗೇರಿ ವಾರ್ಡ್ ನಂ. 2, 4 ಹಾಗೂ 8ರಲ್ಲಿ ಸಿಸಿ ರಸ್ತೆ, ಚರಂಡಿ ಹಾಗೂ ವಿವಿಧ ಸಿವಿಲ್ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ವಾರ್ಡ್ ನಂ. 9, 16, 17 ಹಾಗೂ 18ರಲ್ಲಿ ರಸ್ತೆ ಮತ್ತು ಒಳಚರಂಡಿ ಕಾಮಗಾರಿಗಳಿಗೆ ಶಾಸಕರು ಚಾಲನೆ ನೀಡಿದರು.

ಅವಳಿ ನಗರದ ಮೂಲಸೌಕರ್ಯವನ್ನು ಹಂತ ಹಂತವಾಗಿ ಸುಧಾರಿಸುವ ಮೂಲಕ ಜನರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಶಾಸಕ ಎಚ್.ಕೆ. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಸುರೇಶ ಕಟ್ಟಿಮನಿ, ಶಕುಂತಲಾ ಅಕ್ಕಿ, ಚಂದ್ರು ಕರಿಸೋಮನಗೌಡ್ರ, ನಗರಸಭೆ ಆಯುಕ್ತ ರಾಜಾರಾಮ ಪವಾರ್, ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಹಾಗೂ ವಿವಿಧ ವಾರ್ಡ್‌ಗಳ ಸದಸ್ಯರು ಉಪಸ್ಥಿತರಿದ್ದರು.

65ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಬ್ಯಾಂಕ್ ಅಧ್ಯಕ್ಷ ಸರಫರಾಜ್ ಉಮಚಗಿ ಮಾಹಿತಿ

# ಆಝಾದ್ ಬ್ಯಾಂಕ್‌ಗೆ ₹1.30 ಕೋಟಿ ಲಾಭ; ಷೇರುದಾರರಿಗೆ ಶೇ.12 ಡಿವಿಡೆಂಡ್




**ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಆಝಾದ್ ಕೋ-ಆಪರೇಟಿವ್ ಬ್ಯಾಂಕ್ ಕಳೆದ ಸಾಲಿಗಿಂತ ಈ ವರ್ಷ ಉತ್ತಮ ಪ್ರಗತಿ ಸಾಧಿಸಿದ್ದು, 2025-26ನೇ ಸಾಲಿನಲ್ಲಿ ₹1 ಕೋಟಿ 30 ಲಕ್ಷ 60 ಸಾವಿರ ನಿವ್ವಳ ಲಾಭ ಗಳಿಸಿದೆ. ಷೇರುದಾರರಿಗೆ ಶೇ.12ರಷ್ಟು ಡಿವಿಡೆಂಡ್ ನೀಡಲಾಗುವುದು ಎಂದು ಬ್ಯಾಂಕ್ ಅಧ್ಯಕ್ಷ ಹಾಜಿ ಸರಫರಾಜ್ ಅಹ್ಮದ್ ಎಸ್. ಉಮಚಗಿ ತಿಳಿಸಿದರು. ನಗರದ ಬ್ಯಾಂಕ್ ಸಭಾಂಗಣದಲ್ಲಿ ಭಾನುವಾರ ನಡೆದ ಬ್ಯಾಂಕ್‌ನ 65ನೇ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬ್ಯಾಂಕ್‌ನಲ್ಲಿ 5,792 ಸದಸ್ಯರಿದ್ದು, ₹3 ಕೋಟಿ 40.27 ಲಕ್ಷ ಷೇರು ಬಂಡವಾಳ ಹೊಂದಿದೆ. ₹114 ಕೋಟಿ 62 ಲಕ್ಷ ಠೇವಣಿ ಇದ್ದು, ಠೇವಣಿಗಳಿಗೆ ವಿಮಾ ಭದ್ರತೆ ಇದೆ. ಬ್ಯಾಂಕಿನ ದುಡಿಯುವ ಬಂಡವಾಳ ₹131 ಕೋಟಿ 57.64 ಲಕ್ಷವಾಗಿದ್ದು, ಶಾಖಾ ಕಚೇರಿಗಳನ್ನು ಒಳಗೊಂಡಂತೆ ಒಟ್ಟು ವ್ಯವಹಾರ ₹1,405 ಕೋಟಿ 12.35 ಲಕ್ಷ ತಲುಪಿದೆ ಎಂದು ಮಾಹಿತಿ ನೀಡಿದರು.

ಬ್ಯಾಂಕಿನ ಪ್ರಗತಿಗೆ ಠೇವಣಿದಾರರು, ಷೇರುದಾರರು ಹಾಗೂ ಸಾಲಗಾರರ ಸಹಕಾರ ಮುಖ್ಯವಾಗಿದೆ. ಪಿಗ್ಮಿ ಸಂಗ್ರಹಕಾರರು ಮತ್ತು ಸಿಬ್ಬಂದಿಯ ಪರಿಶ್ರಮವೂ ಬ್ಯಾಂಕಿನ ಪ್ರಗತಿಗೆ ಕಾರಣವಾಗಿದೆ ಎಂದರು.

ಬ್ಯಾಂಕಿನ ಖಾತೆದಾರರಿಗೆ ಈಗಾಗಲೇ ಎಟಿಎಂ ಕಾರ್ಡ್‌ಗಳನ್ನು ವಿತರಿಸಲಾಗಿದ್ದು, ರಾಜ್ಯ ಹಾಗೂ ಹೊರರಾಜ್ಯಗಳಲ್ಲಿರುವ ಯಾವುದೇ ಎಟಿಎಂನಲ್ಲಿ ಸಹಕಾರಿ ಬ್ಯಾಂಕಿನ ಕಾರ್ಡ್ ಬಳಸಿ ಹಣ ಪಡೆಯಲು ಹಾಗೂ ಹಣ ವರ್ಗಾವಣೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಬಳಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕೆಸಿಸಿ ಬ್ಯಾಂಕ್‌ನ ಮಾಜಿ ಅಧ್ಯಕ್ಷ ಹಾಗೂ ಸಹಕಾರಿ ಧುರೀಣ ರೋಣದ ಐ.ಎಸ್. ಪಾಟೀಲ ಮಾತನಾಡಿ, ಸಹಕಾರಿ ಕ್ಷೇತ್ರದ ಬೆಳವಣಿಗೆಯಲ್ಲಿ ಗದಗ ಜಿಲ್ಲೆಯ ಕೊಡುಗೆ ಮಹತ್ವದ್ದಾಗಿದೆ. ಸಹಕಾರಿ ಸಂಸ್ಥೆಗಳು ಜನಸಾಮಾನ್ಯರ ಆರ್ಥಿಕ ಅಗತ್ಯಗಳಿಗೆ ಸ್ಪಂದಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ನೆರವಾಗುತ್ತಿವೆ. ಆಝಾದ್ ಬ್ಯಾಂಕ್ ತನ್ನ ಆಡಳಿತ, ಹಣಕಾಸಿನ ಸ್ಥಿತಿ ಹಾಗೂ ಮುಂದಿನ ಯೋಜನೆಗಳನ್ನು ಷೇರುದಾರರ ಮುಂದಿಡುವ ಮೂಲಕ ಪಾರದರ್ಶಕ ಆಡಳಿತಕ್ಕೆ ಒತ್ತು ನೀಡಿರುವುದು ಶ್ಲಾಘನೀಯ ಎಂದರು.

ಬಡವರು, ಕೂಲಿಕಾರರು ಹಾಗೂ ಮಧ್ಯಮ ವರ್ಗದ ಜನರಿಗೆ ಸಾಲ ಸೌಲಭ್ಯ ಕಲ್ಪಿಸುವ ಮೂಲಕ ಬ್ಯಾಂಕ್ ಸ್ಥಳೀಯರ ಆರ್ಥಿಕ ಪ್ರಗತಿಗೆ ನೆರವಾಗಿದೆ. ಬ್ಯಾಂಕಿನ ಆರ್ಥಿಕ ಸದೃಢತೆ ಕಾಪಾಡಲು ಪಾರದರ್ಶಕ ಆಡಳಿತ, ಪರಿಣಾಮಕಾರಿ ಸಾಲ ವಸೂಲಾತಿ ಹಾಗೂ ಅನುತ್ಪಾದಕ ಆಸ್ತಿಗಳ ನಿಯಂತ್ರಣಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಷೇರುದಾರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸ್ವಾಗತಿಸಿ ಸಭೆಯ ಕಾರ್ಯಸೂಚಿ ಮಂಡಿಸಿ ಅನುಮೋದನೆ ಪಡೆದರು. ಶಾಖಾ ವ್ಯವಸ್ಥಾಪಕ ಆರ್.ಎಂ. ನದಾಫ ಲೆಕ್ಕಪರಿಶೋಧನಾ ವರದಿ ಮಂಡಿಸಿದರು. ನಿರ್ದೇಶಕ ಎನ್.ಬಿ. ಶಾಸ್ತ್ರಿ ನಿವ್ವಳ ಲಾಭ ಹಂಚಿಕೆಯ ವಿವರ ನೀಡಿದರು. ಪ್ರಧಾನ ಕಚೇರಿಯ ವ್ಯವಸ್ಥಾಪಕ ಯಾಸೀನ ಹುಬ್ಬಳ್ಳಿ ವಾರ್ಷಿಕ ಬಜೆಟ್ ಮಂಡಿಸಿ ಅನುಮೋದನೆ ಪಡೆದರು.

ವೇದಿಕೆಯಲ್ಲಿ ಬ್ಯಾಂಕಿನ ಉಪಾಧ್ಯಕ್ಷ ಹುಲಗಣ್ಣ ಬಳ್ಳಾರಿ, ನಿರ್ದೇಶಕರಾದ ಎನ್.ಬಿ. ಶಾಸ್ತ್ರಿ, ಆರ್.ಎಲ್. ಬಾಗಲಕೋಟ, ಎಂ.ಎ. ಹಣಗಿ, ಗುಲ್ಜಾರ್‌ಭಾನು ಮುಜಾವರ, ಯಲ್ಲಪ್ಪ ತೋಟದ, ರೇಣುಕಾಬಾಯಿ ಕಲಾಲ, ಶಾನವಾಜ ಉಮಚಗಿ, ಬಿ.ಎಸ್. ಢಾಲಾಯತ, ಮಹೇಶ್ವರಯ್ಯ ಕೋಟಗುಣಶಿಮಠ, ಪರಶುರಾಮ ಪಾತ್ರೋಟ, ಎಚ್.ಎನ್. ಇಟಗಿ, ಡಾ. ಪ್ಯಾರಅಲಿ ನೂರಾನಿ, ಆರ್.ಕೆ. ಹಬೀಬ, ಎ.ಎಂ. ಮುಲ್ಲಾ ಹಾಗೂ ಇಸೂಫ್ ಇಟಗಿ ಉಪಸ್ಥಿತರಿದ್ದರು. ಮಹ್ಮದ್ ಗೌಸ್ ಜಮಾಲಸಾಬನವರ ಖುರಾನ್ ಪಠಿಸಿದರು. ಎಂ.ಎಂ. ಶಿರಹಟ್ಟಿ ನಿರೂಪಿಸಿದರು. ಎಂ.ಎ. ಹಣಗಿ ವಂದಿಸಿದರು. ಸಭೆಯಲ್ಲಿ ಷೇರುದಾರರು ಹಾಗೂ ಗಣ್ಯರು ಪಾಲ್ಗೊಂಡಿದ್ದರು.

# ವಿಜ್ಞಾನ-ತಂತ್ರಜ್ಞಾನ ಮಾನವ ಕಲ್ಯಾಣಕ್ಕಾಗಿರಲಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿಜ್ಞಾನ ಮತ್ತು ತಂತ್ರಜ್ಞಾನ ಎಷ್ಟೇ ಮುಂದುವರಿದರೂ ಅವುಗಳ ಬಳಕೆಗೆ ವಿವೇಕ, ನೈತಿಕತೆ ಹಾಗೂ ಮಾನವೀಯ ಮೌಲ್ಯಗಳ ಮಾರ್ಗದರ್ಶನ ಅಗತ್ಯ ಎಂದು ಸಾಹಿತಿ, ಚಿಂತಕ ನಾಗರಾಜ ಕುಲಕರ್ಣಿ ಹೇಳಿದರು.

ಅಕ್ಕಮಹಾದೇವಿ ದೇವಸ್ಥಾನದಲ್ಲಿ ನಡೆದ ಸತ್ಸಂಗ ಕಾರ್ಯಕ್ರಮದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಒಂದೇ ನಾಣ್ಯದ ಎರಡು ಮುಖಗಳು ವಿಷಯ ಕುರಿತು ಉಪನ್ಯಾಸ ನೀಡಿದ ಅವರು, ವಿಜ್ಞಾನ ಜ್ಞಾನ ನೀಡಿದರೆ ತಂತ್ರಜ್ಞಾನ ಅದನ್ನು ಕಾರ್ಯರೂಪಕ್ಕೆ ತರುವ ಸಾಧನವಾಗಿದೆ. ಇವೆರಡನ್ನೂ ಮಾನವ ಕಲ್ಯಾಣಕ್ಕಾಗಿ ಬಳಸಬೇಕು ಎಂದರು.

ಆರೋಗ್ಯದ ಕುರಿತು ಸರಿಯಾದ ಜ್ಞಾನ ಮತ್ತು ಅರಿವು ಹೊಂದಿದಾಗ ಮಾತ್ರ ಆಧುನಿಕ ವಿಜ್ಞಾನ ಹಾಗೂ ತಂತ್ರಜ್ಞಾನವನ್ನು ಜೀವನದಲ್ಲಿ ಸಮರ್ಪಕವಾಗಿ ಅಳವಡಿಸಿಕೊಳ್ಳಲು ಸಾಧ್ಯ. ತಂತ್ರಜ್ಞಾನವನ್ನು ಕೇವಲ ಮನರಂಜನೆಗೆ ಬಳಸದೆ ಶಿಕ್ಷಣ, ಆರೋಗ್ಯ, ಸಂಶೋಧನೆ ಹಾಗೂ ಸಮಾಜದ ಅಭಿವೃದ್ಧಿಗೆ ಬಳಸಬೇಕು ಎಂದರು.

ಜ್ಞಾನಕ್ಕೆ ವಿವೇಕದ ದಾರಿ, ವಿಜ್ಞಾನಕ್ಕೆ ಧರ್ಮದ ಮಾರ್ಗದರ್ಶನ ದೊರೆತಾಗ ಮಾತ್ರ ತಂತ್ರಜ್ಞಾನ ಮಾನವಕುಲದ ಒಳಿತಿಗೆ ಪರಿಣಾಮಕಾರಿಯಾಗುತ್ತದೆ ಎಂದು ಹೇಳಿದರು.

ಸೋಮೇಶ್ವರ ದೇವಸ್ಥಾನದ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು. ಮಲ್ಲಿಕಾರ್ಜುನ ಕಳಸಾಪೂರ, ಮಹೇಶ ಹೊಗೆಸೊಪ್ಪಿನ ಹಾಗೂ ಬಸವರಾಜ ಸಾಸಲವಾಡ ಅತಿಥಿಗಳಾಗಿ ಪಾಲ್ಗೊಂಡಿದ್ದರು. ವೈಶಾಖ ಬಿಂಕದಕಟ್ಟಿ, ಎಂ.ಕೆ. ಕಳ್ಳಿಮಠ, ಶಂಕರ ಶಿಳ್ಳಿನ ಇದ್ದರು.

ಡಾ. ಎಂ.ಡಿ. ಸಮುದ್ರಿಯವರ **ಭಾವೈಕ್ಯತೆಯ ಬೆಳಕು** ಧರ್ಮಗಳ ನಡುವೆ ಗೋಡೆ ಕಟ್ಟುವುದಲ್ಲ, ಹೃದಯಗಳ ನಡುವೆ ಸೇತುವೆ ಕಟ್ಟುವ ಕೃತಿ

# ಪ್ರವಾದಿಗಳ ಬೆಳಕಿನಲ್ಲಿ ಮಾನವೀಯತೆಯ ಮಹಾಪಯಣ

ಮಾನವ ಇತಿಹಾಸದ ಸುದೀರ್ಘ ಪಯಣದಲ್ಲಿ ಪ್ರವಾದಿಗಳು, ಸಂತರು, ಶರಣರು, ಋಷಿಗಳು ಹಾಗೂ ದಾರ್ಶನಿಕರು ಮನುಷ್ಯನಿಗೆ ಪ್ರೀತಿ, ಕರುಣೆ, ನ್ಯಾಯ, ಸಮಾನತೆ ಮತ್ತು ಸಹೋದರತ್ವದ ಸಂದೇಶ ಸಾರಿದ್ದಾರೆ. ಕಾಲ, ದೇಶ, ಭಾಷೆ ಮತ್ತು ಧಾರ್ಮಿಕ ಆಚರಣೆಗಳು ಬದಲಾದರೂ ಮನುಷ್ಯನ ಹೃದಯಕ್ಕೆ ಅಗತ್ಯವಾದ ಈ ಮೌಲ್ಯಗಳು ಎಂದಿಗೂ ಬದಲಾಗಿಲ್ಲ. ಆ ಶಾಶ್ವತ ಮಾನವೀಯ ಸಂದೇಶವನ್ನು ಕನ್ನಡದ ನೆಲದಲ್ಲಿ ಮತ್ತೊಮ್ಮೆ ಮೊಳಗಿಸುವ ಪ್ರಯತ್ನವೇ ಡಾ. ಎಂ.ಡಿ. ಸಮುದ್ರಿಯವರ ಭಾವೈಕ್ಯತೆಯ ಬೆಳಕು.


ಗದಗದ ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದಲ್ಲಿ ಸೋಮವಾರ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಅಮೃತಹಸ್ತದಿಂದ ಶಿವಾನುಭವ ಕಾರ್ಯಕ್ರಮದಲ್ಲಿ ಕೃತಿ ಲೋಕಾರ್ಪಣೆಯಾಗಿದೆ. ಇದು ಕೇವಲ ಪುಸ್ತಕ ಬಿಡುಗಡೆಯಲ್ಲ; ಧರ್ಮಸಮನ್ವಯ, ಭಾವೈಕ್ಯತೆ ಮತ್ತು ಮಾನವೀಯತೆಯ ಪರವಾಗಿ ಬೆಳಗಿದ ದೀಪದ ಪ್ರಜ್ವಲನೆಯಾಗಿದೆ.

ಪ್ರವಾದಿ ಮಹಮ್ಮದ್ ಪೈಗಂಬರರ ಜೀವನ ಮತ್ತು ಸಂದೇಶದಲ್ಲಿ ಕರುಣೆ, ನ್ಯಾಯ, ಸಹೋದರತ್ವ, ದಾನ, ನೆರೆಹೊರೆಯವರ ಹಕ್ಕು, ದುರ್ಬಲರ ರಕ್ಷಣೆ ಹಾಗೂ ಮಾನವ ಘನತೆಗೆ ವಿಶೇಷ ಸ್ಥಾನವಿದೆ. ಮನುಷ್ಯನನ್ನು ಮನುಷ್ಯನಾಗಿ ಗೌರವಿಸುವುದು, ಅನ್ಯಾಯವನ್ನು ವಿರೋಧಿಸುವುದು ಹಾಗೂ ಸಮಾಜದ ದುರ್ಬಲರೊಂದಿಗೆ ನಿಲ್ಲುವುದು ಅವರ ಸಂದೇಶದ ಪ್ರಮುಖ ಆಶಯಗಳಾಗಿವೆ. ಧರ್ಮದ ನಿಜವಾದ ಪರೀಕ್ಷೆ ಕೇವಲ ಧಾರ್ಮಿಕ ಆಚರಣೆಗಳಲ್ಲಿ ನಡೆಯುವುದಿಲ್ಲ; ಹಸಿದವನಿಗೆ ಅನ್ನ ನೀಡುವ ಕೈಯಲ್ಲಿ, ಬಿದ್ದವನನ್ನು ಎತ್ತುವ ಮನಸ್ಸಿನಲ್ಲಿ ಮತ್ತು ಅನ್ಯಾಯಕ್ಕೊಳಗಾದವನ ಪರ ನಿಲ್ಲುವ ಧೈರ್ಯದಲ್ಲಿ ಧರ್ಮದ ಜೀವಂತ ರೂಪ ಕಾಣುತ್ತದೆ.

ಈ ಕೃತಿಯ ಪ್ರಮುಖ ವೈಚಾರಿಕ ಕೊಡುಗೆ ಎಂದರೆ ಪೈಗಂಬರರ ಮಾನವೀಯ ಸಂದೇಶವನ್ನು ಬಸವಣ್ಣನವರ ಶರಣ ಚಿಂತನೆಯೊಂದಿಗೆ ಸಂವಾದಕ್ಕೆ ತರುವ ಪ್ರಯತ್ನ. ಬಸವಣ್ಣನವರ ಇವ ನಮ್ಮವ, ಇವ ನಮ್ಮವ ಎಂಬ ಭಾವವು ಜಾತಿ, ವರ್ಗ, ಜನ್ಮ ಮತ್ತು ಮೇಲು-ಕೀಳುಗಳ ಗೋಡೆಗಳನ್ನು ಮೀರಿ ಮನುಷ್ಯನನ್ನು ಮನುಷ್ಯನಾಗಿ ಕಾಣುವ ವಿಶಾಲ ದೃಷ್ಟಿಯಾಗಿದೆ. ಪೈಗಂಬರರ ಸಹೋದರತ್ವದ ಆಶಯವೂ ಮನುಷ್ಯರ ನಡುವೆ ಪರಸ್ಪರ ಹೊಣೆಗಾರಿಕೆ, ಕರುಣೆ ಮತ್ತು ಮಾನವೀಯ ಸಂಬಂಧವನ್ನು ಬಲಪಡಿಸುತ್ತದೆ.

ಬಸವಣ್ಣನವರ ಕಾಯಕದ ಪರಿಕಲ್ಪನೆ ಮನುಷ್ಯನ ಸ್ವಾಭಿಮಾನ ಮತ್ತು ಪ್ರಾಮಾಣಿಕ ದುಡಿಮೆಯನ್ನು ಪ್ರತಿಪಾದಿಸಿದರೆ, ದಾಸೋಹವು ಗಳಿಸಿದ್ದನ್ನು ಸಮಾಜದೊಂದಿಗೆ ಹಂಚಿಕೊಳ್ಳುವ ಸಂಸ್ಕೃತಿಯನ್ನು ಸಾರುತ್ತದೆ. ಇಸ್ಲಾಮಿನ ಜಕಾತ್ ಪರಂಪರೆಯೂ ಸಂಪತ್ತಿನಲ್ಲಿ ಬಡವರ ಹಕ್ಕನ್ನು ಗುರುತಿಸುವ ಸಾಮಾಜಿಕ ಹೊಣೆಗಾರಿಕೆಯನ್ನು ಪ್ರತಿಪಾದಿಸುತ್ತದೆ. ಕಾಯಕ ಕೈಗೆ ಶಕ್ತಿ ನೀಡಿದರೆ, ದಾಸೋಹ ಹೃದಯಕ್ಕೆ ವಿಶಾಲತೆ ನೀಡುತ್ತದೆ. ಗಳಿಸುವುದು ಬದುಕನ್ನು ಕಟ್ಟಿದರೆ, ಹಂಚಿಕೊಳ್ಳುವುದು ಸಮಾಜವನ್ನು ಕಟ್ಟುತ್ತದೆ ಎಂಬ ಸಂದೇಶ ಇಲ್ಲಿ ಮಹತ್ವ ಪಡೆಯುತ್ತದೆ.

ಇಂದಿನ ಸಮಾಜದಲ್ಲಿ ಧರ್ಮ, ಜಾತಿ, ಭಾಷೆ




ಮತ್ತು ವಿಚಾರಗಳ ಭಿನ್ನತೆಗಳು ಕೆಲವೊಮ್ಮೆ ದ್ವೇಷಕ್ಕೆ ಕಾರಣವಾಗುತ್ತಿರುವುದು ಆತಂಕಕಾರಿ. ಇಂತಹ ಸಂದರ್ಭದಲ್ಲಿ ಭಾವೈಕ್ಯತೆಯ ಅಗತ್ಯ ಮತ್ತಷ್ಟು ಹೆಚ್ಚಿದೆ. ನಿನ್ನ ಧರ್ಮವನ್ನು ಪ್ರೀತಿಸು; ಆದರೆ ಮತ್ತೊಬ್ಬನ ಧರ್ಮವನ್ನು ದ್ವೇಷಿಸಬೇಡ. ನಿನ್ನ ನಂಬಿಕೆಯಲ್ಲಿ ದೃಢವಾಗಿರು, ಆದರೆ ಮತ್ತೊಬ್ಬನ ನಂಬಿಕೆಯ ಹಕ್ಕನ್ನು ಗೌರವಿಸು ಎಂಬ ಸರಳ ಸೂತ್ರವೇ ಸೌಹಾರ್ದ ಸಮಾಜದ ಅಡಿಪಾಯವಾಗಬಹುದು.

ಗದಗದ ನೆಲಕ್ಕೆ ಶರಣ ಪರಂಪರೆಯ ಜೊತೆಗೆ ಸೂಫಿ-ಸಂತ ಪರಂಪರೆಯ ಸೌಹಾರ್ದದ ನೆನಪೂ ಇದೆ. ವಿವಿಧ ಧರ್ಮಗಳ ಜನರು ಪರಸ್ಪರ ಗೌರವದಿಂದ ಬದುಕಿದ ಸಾಮಾಜಿಕ ಅನುಭವವೂ ಇಲ್ಲಿದೆ. ಇಂತಹ ನೆಲದಲ್ಲಿ ಭಾವೈಕ್ಯತೆಯ ಬೆಳಕು ಕೃತಿ ಲೋಕಾರ್ಪಣೆಯಾಗಿರುವುದು ಅರ್ಥಪೂರ್ಣ ಸಾಂಸ್ಕೃತಿಕ ಸಂದರ್ಭವಾಗಿದೆ. ವಿಶೇಷವಾಗಿ ತೋಂಟದಾರ್ಯ ಸಂಸ್ಥಾನಮಠದ ಶಿವಾನುಭವದ ಪವಿತ್ರ ವಾತಾವರಣದಲ್ಲಿ ಕೃತಿ ಅನಾವರಣಗೊಂಡಿರುವುದು ಆಧ್ಯಾತ್ಮವು ಗೋಡೆಗಳನ್ನು ಕಟ್ಟುವುದಕ್ಕಾಗಿ ಅಲ್ಲ, ಹೃದಯಗಳನ್ನು ವಿಶಾಲಗೊಳಿಸುವುದಕ್ಕಾಗಿ ಎಂಬ ಸಂದೇಶವನ್ನು ನೀಡಿದೆ.

ಯುವಜನತೆ ಈ ಕೃತಿಯ ಆಶಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕಾಗಿದೆ. ಇಂದು ಮಾಹಿತಿ ಯುಗದಲ್ಲಿ ಬದುಕುತ್ತಿರುವ ಯುವಕರಿಗೆ ಮಾಹಿತಿ ಮಾತ್ರವಲ್ಲ, ಸತ್ಯವನ್ನು ಪರಿಶೀಲಿಸುವ ವಿವೇಕ, ಭಿನ್ನತೆಯನ್ನು ಗೌರವಿಸುವ ಸಂಸ್ಕಾರ, ಸಂವಿಧಾನದ ಮೌಲ್ಯಗಳ ಅರಿವು ಮತ್ತು ಮಾನವೀಯ ದೃಷ್ಟಿಕೋನ ಅಗತ್ಯ. ಪ್ರವಾದಿಗಳ ಸಂದೇಶ, ಬಸವಣ್ಣನವರ ವಚನಗಳು ಮತ್ತು ಭಾರತೀಯ ಸಂವಿಧಾನದ ಭ್ರಾತೃತ್ವದ ಆಶಯಗಳನ್ನು ಅರಿತುಕೊಂಡು ಯುವಕರು ಸಮಾಜವನ್ನು ಮುನ್ನಡೆಸಿದರೆ ದೇಶದ ಏಕತೆ ಮತ್ತಷ್ಟು ಬಲಗೊಳ್ಳಲಿದೆ.

ವೈದ್ಯರಾಗಿರುವ ಡಾ. ಎಂ.ಡಿ. ಸಮುದ್ರಿಯವರು ದೇಹದ ನೋವನ್ನು ಗುಣಪಡಿಸುವ ವೃತ್ತಿಯ ಜೊತೆಗೆ ಸಮಾಜದ ನೋವನ್ನೂ ಅರ್ಥಮಾಡಿಕೊಂಡು ಈ ಕೃತಿಯನ್ನು ರಚಿಸಿರುವುದು ಅವರ ಸಾಮಾಜಿಕ ಕಾಳಜಿಯ ವಿಸ್ತಾರವನ್ನು ತೋರಿಸುತ್ತದೆ.

ದೇಹದ ಗಾಯಕ್ಕೆ ಔಷಧಿ ಬೇಕು, ಮನಸ್ಸಿನ ಗಾಯಕ್ಕೆ ಮಾನವೀಯತೆ ಬೇಕು, ಸಮಾಜದ ಗಾಯಕ್ಕೆ ಭಾವೈಕ್ಯತೆ ಬೇಕು. ಈ ಮೂರನೆಯ ಚಿಕಿತ್ಸೆಯತ್ತ ಭಾವೈಕ್ಯತೆಯ ಬೆಳಕು ನಮ್ಮ ಗಮನ ಸೆಳೆಯುತ್ತದೆ.

ಈ ಕೃತಿಯನ್ನು ಕೇವಲ ಪ್ರವಾದಿ ಮಹಮ್ಮದ್ ಪೈಗಂಬರರ ಜೀವನ ಮತ್ತು ಸಂದೇಶದ ಕುರಿತ ಕೃತಿಯಾಗಿ ನೋಡಿದರೆ ಅದರ ವ್ಯಾಪ್ತಿ ಸೀಮಿತವಾಗುತ್ತದೆ.

ಇದು ಮೂಲತಃ ಮನುಷ್ಯನು ಮನುಷ್ಯನನ್ನು ಹೇಗೆ ನೋಡಬೇಕು? ಎಂಬ ಪ್ರಶ್ನೆಯನ್ನು ಮುಂದಿಡುತ್ತದೆ.

ಧರ್ಮಗಳ ನಡುವಿನ ಭಿನ್ನತೆಯನ್ನು ಸಂಘರ್ಷದ ಕಾರಣವನ್ನಾಗಿಸುವ ಬದಲು, ಅವುಗಳಲ್ಲಿರುವ ಮಾನವೀಯ ಮೌಲ್ಯಗಳನ್ನು ಗುರುತಿಸಿ ಸಮಾಜವನ್ನು ಕಟ್ಟುವ ಸಾಧ್ಯತೆಯನ್ನು ಈ ಕೃತಿ ತೆರೆದಿಡುತ್ತದೆ.

ಪ್ರವಾದಿಗಳ ಕರುಣೆ, ಬಸವಣ್ಣನವರ ಸಮಾನತೆ ಮತ್ತು ಭಾರತೀಯ ಸಂವಿಧಾನದ ಭ್ರಾತೃತ್ವ ಒಂದಾಗಿ ಬೆಸೆದುಕೊಂಡಾಗ ಭಾರತ ವಿಶ್ವಮಾನವೀಯತೆಯ ದಾರಿದೀಪವಾಗಬಲ್ಲದು. ಕತ್ತಲೆ ಯಾರ ಧರ್ಮವೂ ಅಲ್ಲ, ಬೆಳಕು ಯಾರೊಬ್ಬರ ಸ್ವತ್ತೂ ಅಲ್ಲ. ಬೆಳಕು ಎಲ್ಲರಿಗೂ, ಮಾನವೀಯತೆ ಎಲ್ಲರಿಗೂ. ಹಾಗೆಯೇ ಭಾವೈಕ್ಯತೆಯೂ ಎಲ್ಲರಿಗೂ.

ಭಾವೈಕ್ಯತೆಯ ಬೆಳಕು ಕೇವಲ ಪುಸ್ತಕ ವಾಗಿ ಉಳಿಯದೆ, ಧರ್ಮಗಳ ನಡುವೆ ಸೇತುವೆ ನಿರ್ಮಿಸುವ, ಮನಸ್ಸುಗಳ ನಡುವೆ ಪ್ರೀತಿ ಬೆಳೆಸುವ ಮತ್ತು ಸಮಾಜದ ಕತ್ತಲಲ್ಲಿ ಮಾನವೀಯತೆಯ ದೀಪವಾಗಿ ಹೊತ್ತಿ ಉರಿಯುವ ಕೃತಿಯಾಗಲಿ ಎಂಬುದು ಆಶಯ.

**- ಅಮೀರನಾಯಕ (ಕಲ್ಲಿಗನೂರ)**
**ಯುವ ಬರಹಗಾರರು**
**ಪಂಚಾಯಿತಿ ಅಭಿವೃದ್ಧಿ ಅಧಿಕಾರಿ,**
**ಗ್ರಾಮ ಪಂಚಾಯಿತಿ, ಲಕ್ಕುಂಡಿ**

## ಸಂಕ್ಷಿಪ್ತ ಸುದ್ದಿಗಳು

# ಮಕ್ಕಳ ಪ್ರತಿಭೆಗೆ ಪ್ರೋತ್ಸಾಹವೇ ಭವಿಷ್ಯದ ಬುನಾದಿ




**ವಿಜಯಸಾಕ್ಷಿ ಸುದ್ದಿ, ಗದಗ**
ಪ್ರತಿಯೊಂದು ಮಗುವೂ ತನ್ನದೇ ಆದ ಪ್ರತಿಭೆ, ಶಕ್ತಿ ಹಾಗೂ ಸಾಮರ್ಥ್ಯ ಹೊಂದಿರುತ್ತದೆ. ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಮೂಲಕ ಅವರು ವೈಯಕ್ತಿಕ ಹಾಗೂ ಸಾಮಾಜಿಕ ಬದುಕಿನಲ್ಲಿ ಉತ್ತಮ ಸಾಧನೆ ಮಾಡುವಂತೆ ಬೆಳೆಸಬೇಕು ಎಂದು ಚಿಂತಕಿ ಶಶಿಕಲಾ ಮಾಲೀಪಾಟೀಲ ಹೇಳಿದರು. ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ನಂ. 11ರಲ್ಲಿ ಶನಿವಾರ ಆಯೋಜಿಸಿದ್ದ ಅಮೃತ ಭೋಜನಜ್ಞಾನ ಸಿಂಚನ ಕಾರ್ಯಕ್ರಮದಲ್ಲಿ ಶಾಲೆಗೆ ಕರೋಕೆ ಸೌಂಡ್ ಬಾಕ್ಸ್ ಕೊಡುಗೆ ನೀಡಿ ಅವರು ಮಾತನಾಡಿದರು.

ಮಕ್ಕಳು ಬಾಲ್ಯದಿಂದಲೇ ವೀಕ್ಷಿಸುವ, ಯೋಚಿಸುವ, ಕಲ್ಪಿಸುವ, ಅನ್ವೇಷಿಸುವ, ನಿರ್ಧರಿಸುವ ಹಾಗೂ ಸೃಜನಶೀಲ ಗುಣಗಳನ್ನು ಬೆಳೆಸಿಕೊಳ್ಳಬೇಕು. ವೈಜ್ಞಾನಿಕ ಮನೋಭಾವದೊಂದಿಗೆ ಸಂಸ್ಕಾರಯುತವಾಗಿ ಹಿರಿಯರ ಮಾರ್ಗದರ್ಶನದಲ್ಲಿ ಬೆಳೆದು ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದರು. ಚಿಂತಕಿ ಸುಶೀಲಾ ಕೋಟಿ ಮಕ್ಕಳಿಗೆ ಸಿಹಿ ವಿತರಿಸಿ ಮಾತನಾಡಿ, ಬರವಣಿಗೆ ನಮ್ಮ ಯೋಚನೆ, ಆಲೋಚನೆ ಹಾಗೂ ಭಾವನೆಗಳನ್ನು ಇತರರಿಗೆ ತಲುಪಿಸುವ ಸಾಧನ. ಶಿಸ್ತಿನ ಹಾಗೂ ಸುಂದರ ಬರವಣಿಗೆ ವ್ಯಕ್ತಿತ್ವ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಮಕ್ಕಳು ಮೊಬೈಲ್ ಹಾಗೂ ದೂರದರ್ಶನದಿಂದ ದೂರವಿದ್ದು ಓದಿನ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದರು. ಮುಖ್ಯ ಅತಿಥಿ ಗದಗ ಡಯಟ್‌ನ ಉಪನ್ಯಾಸಕಿ ಸುಧಾ ಬೆನಿಕಲ್ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿ, ಕದಳಿಶ್ರೀ ವೇದಿಕೆ ಪ್ರತಿವರ್ಷ ಶ್ರಾವಣ ಮಾಸದಲ್ಲಿ ಸರ್ಕಾರಿ ಶಾಲೆಗಳಿಗೆ ಕಲಿಕಾ ಸಾಮಗ್ರಿ ವಿತರಿಸುವುದರ ಜೊತೆಗೆ ಮಕ್ಕಳಿಗೆ ಭೋಜನ ನೀಡಿ ಮೌಲ್ಯಗಳನ್ನು ಬಿತ್ತುವ ಕಾರ್ಯ ಮಾಡುತ್ತಿದೆ. ಮಕ್ಕಳು ಶರಣರ ಜೀವನ ಹಾಗೂ ವೀರಮಾತೆಯರ ಜೀವನ ಚರಿತ್ರೆಗಳನ್ನು ಓದಿ ಪ್ರೇರಣೆ ಪಡೆಯಬೇಕು ಎಂದರು. ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಮುದಾಯದ ಸಹಭಾಗಿತ್ವ ಅಗತ್ಯ. ಕದಳಿಶ್ರೀ ವೇದಿಕೆ ಸರ್ಕಾರಿ ಶಾಲೆ ಹಾಗೂ ಸಮುದಾಯದ ನಡುವೆ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ದಾನಿಗಳ ಸಹಕಾರದಿಂದ ಶಾಲೆಗಳಿಗೆ ಅಗತ್ಯ ಕೊಡುಗೆಗಳನ್ನು ನೀಡುತ್ತಿದೆ ಎಂದರು. ವಿದ್ಯಾರ್ಥಿಗಳಾದ ಅಮೂಲ್ಯ ಅನಗವಾಡಿ, ಖುಷಿ ಕಲಾಲ, ರಾಧಿಕಾ ಮಡಿವಾಳರ ಹಾಗೂ ಸಂತೋಷ ತಳವಾರ ವಚನ ಪ್ರಾರ್ಥನೆ ಸಲ್ಲಿಸಿದರು. ಶಿಕ್ಷಕಿ ಮಂಜುಳಾ ಕೊಳ್ಳಿ ಸ್ವಾಗತಿಸಿ ನಿರೂಪಿಸಿದರು. ನವರಿನ್ ಜಾಲಿಹಾಳ ವಂದಿಸಿದರು.

---

### ಜಮೀನಿನಲ್ಲಿ ಬೆಳೆ ವೈವಿಧ್ಯ, ಹೈನುಗಾರಿಕೆ, ಕುರಿ ಕೋಳಿ ಸಾಕಾಣಿಕೆಯಿಂದ ರೈತರು ಆರ್ಥಿಕವಾಗಿ ಸದೃಢರಾಗಬೇಕು: ಕವಿತಾ ಮಿಶ್ರಾ

# ರೈತರು ಯಾವ ಇಂಜಿನಿಯರ್‌ಗಿಂತ ಕಡಿಮೆ ಇಲ್ಲ

**ವಿಜಯಸಾಕ್ಷಿ ಸುದ್ದಿ, ಗದಗ**
ರೈತರು ಸ್ವಾಭಿಮಾನದಿಂದ ಬದುಕಬೇಕು. ಕೃಷಿಯಲ್ಲಿ ಬೆಳೆ ವೈವಿಧ್ಯ ಅಳವಡಿಸಿಕೊಂಡು ಹೈನುಗಾರಿಕೆ, ಕುರಿಕೋಳಿ ಸಾಕಾಣಿಕೆ ಹಾಗೂ ತೋಟಗಾರಿಕೆಯನ್ನು ಸಂಯೋಜಿಸಿದರೆ ರೈತರು ಕೂಡ ಇಂಜಿನಿಯರ್‌ಗಳಂತೆ ಕೋಟ್ಯಂತರ ರೂಪಾಯಿ ವಹಿವಾಟು ನಡೆಸಬಹುದು ಎಂದು ಆದರ್ಶ ರೈತ ಮಹಿಳೆ ಕವಿತಾ ಮಿಶ್ರಾ ಹೇಳಿದರು. ನಗರದ ಒಕ್ಕಲಗೇರಿ ಓಣಿಯಲ್ಲಿ 18 ವರ್ಷಗಳ ಬಳಿಕ ನಡೆಯುತ್ತಿರುವ ಶ್ರೀ ದ್ಯಾಮವ್ವ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರೋತ್ಸವದ ಐದನೇ ದಿನ ನಡೆದ ಕಾರ್ಯಕ್ರಮದಲ್ಲಿ ರೈತರ ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು. ತಾವು ಮೂಲತಃ ಕೃಷಿಕರಲ್ಲ. ಇಂಜಿನಿಯರಿಂಗ್ ಪದವಿ ಪಡೆದು ಉದ್ಯೋಗದ ಕನಸು ಕಾಣುತ್ತಿದ್ದ ಸಂದರ್ಭದಲ್ಲಿ ವಿವಾಹವಾಗಿ ಕೃಷಿ ಕುಟುಂಬಕ್ಕೆ ಬಂದೆ. ಕಲ್ಲುಗಳಿಂದ ತುಂಬಿದ್ದ ಜಮೀನನ್ನು ಅಭಿವೃದ್ಧಿಪಡಿಸಲು ಎಂಟು ವರ್ಷ ಶ್ರಮಿಸಿದೆ. ಬೋರ್‌ವೆಲ್ ಕೊರೆಯಿಸಲು ಹಣವಿಲ್ಲದಾಗ ಬಂಗಾರದ ಬಳೆಗಳನ್ನು ಮಾರಿ ನೀರಿಗಾಗಿ ಪ್ರಯತ್ನಿಸಿದೆ. ಬಳಿಕ ಜಮೀನಿನಲ್ಲಿ ನೀರು ಸಿಕ್ಕಿದ್ದು ಬದುಕಿಗೆ ಹೊಸ ತಿರುವು ನೀಡಿತು. ಎಂಟು ಎಕರೆ ಜಮೀನಿನಲ್ಲಿ ವಿವಿಧ ತೋಟಗಾರಿಕೆ ಬೆಳೆಗಳೊಂದಿಗೆ ಹೈನುಗಾರಿಕೆ, ಕುರಿ ಹಾಗೂ ಕೋಳಿ ಸಾಕಾಣಿಕೆ ಆರಂಭಿಸಿ ಬದುಕು ಕಟ್ಟಿಕೊಂಡಿದ್ದೇನೆ ಎಂದು ತಮ್ಮ ಅನುಭವ ಹಂಚಿಕೊಂಡರು. ಮಳೆಯ ಅತಿವೃಷ್ಟಿಯಿಂದ ಬೆಳೆ ಹಾನಿಯಾದ ಸಂದರ್ಭದಲ್ಲಿ ಜೀವನದಲ್ಲಿ ತೀವ್ರ ಸಂಕಷ್ಟ ಎದುರಾಯಿತು. ಆದರೂ ಧೈರ್ಯ ಕಳೆದುಕೊಳ್ಳದೆ ಮತ್ತೆ ಕೃಷಿಯತ್ತ ಮರಳಿದೆ. ಸಂಕಷ್ಟಗಳು ರೈತನನ್ನು ಕುಗ್ಗಿಸಬಾರದು; ಹೊಸ ಮಾರ್ಗಗಳನ್ನು ಹುಡುಕುವಂತೆ ಮಾಡಬೇಕು ಎಂದರು.

ಹೆಣ್ಣು ಮಕ್ಕಳು ತಾಯಿ, ಹೆಂಡತಿ, ಮಗಳು ಹಾಗೂ ಸೊಸೆಯಾಗಿ ಕುಟುಂಬದಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಹೆಣ್ಣುಮಕ್ಕಳನ್ನು ಎರಡು ಕುಟುಂಬಗಳ ನಡುವೆ ಸೇತುವೆಯನ್ನಾಗಿ ಮಾಡುವ ಉದ್ದೇಶದಿಂದ ವಿವಾಹ ಮಾಡಬೇಕು. ಮಕ್ಕಳಲ್ಲಿ ಬಾಲ್ಯದಿಂದಲೇ ಸಂಸ್ಕಾರ ಬಿತ್ತಬೇಕು. ತಂದೆ-ತಾಯಿ ವೃದ್ಧಾಪ್ಯದಲ್ಲಿ ಮಕ್ಕಳಿಂದ ದೂರವಾಗದಂತೆ ಕುಟುಂಬದಲ್ಲಿ ಪ್ರೀತಿ ಮತ್ತು ಮೌಲ್ಯಗಳನ್ನು ಬೆಳೆಸಬೇಕು ಎಂದು ಸಲಹೆ ನೀಡಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಾತಿಮತ ಮರೆತು ಭಕ್ತಿ ಮತ್ತು ಶ್ರದ್ಧೆಯಿಂದ ಜಾತ್ರೆ ನಡೆಯುತ್ತಿರುವುದು ಸಂತಸದ ಸಂಗತಿ. ಭಾರತ ಆರ್ಥಿಕವಾಗಿ ಇನ್ನಷ್ಟು ಬೆಳೆಯಬೇಕಾದರೂ ಧಾರ್ಮಿಕ ಹಾಗೂ ಆಧ್ಯಾತ್ಮಿಕವಾಗಿ ಶ್ರೀಮಂತ ರಾಷ್ಟ್ರವಾಗಿದೆ. ನಿಜವಾದ ಧರ್ಮ ಎಂದರೆ ಎಲ್ಲರಿಗೂ ಒಳಿತು ಮಾಡುವುದಾಗಿದೆ ಎಂದರು. ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಕವಿತಾ ಮಿಶ್ರಾ ಅವರ ಸಾಧನೆ ರೈತರು ಸ್ವಾಭಿಮಾನದಿಂದ ಬದುಕಲು ಪ್ರೇರಣೆಯಾಗಿದೆ. ರೈತರ ಬೆಳೆಗಳಿಗೆ ಬೆಲೆ ನಿಗದಿ ಮಾಡುವ ಹಕ್ಕು ರೈತರಿಗೇ ಸಿಗಬೇಕು ಎಂದು ಒತ್ತಾಯಿಸಿದರು. ಸೂಡಿ ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ಟ್ರಸ್ಟ್ ಸಮಿತಿ ಅಧ್ಯಕ್ಷ ಕೊಟ್ರಪ್ಪ ಕಮತರ, ಜಾತ್ರಾ ಸಮಿತಿ ಕಾರ್ಯಾಧ್ಯಕ್ಷ ಫಕ್ಕೀರಪ್ಪ ಹೆಬಸೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕನಕದಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ರವಿ ದಂಡಿನ, ಉದ್ಯಮಿ ವಿಜಯಕುಮಾರ ಗಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಕೀಲ ಎಂ.ಎಂ. ಹಿರೇಮಠ ಕವಿತಾ ಮಿಶ್ರಾ ಅವರ ಪರಿಚಯ ಮಾಡಿದರು. ಚೈತ್ರ ಶಿವಪ್ಪನಮಠ ಪ್ರಾರ್ಥಿಸಿದರು. ಸುಜಾತ ಗುಗ್ಗುರಿ ಸ್ವಾಗತಿಸಿದರು. ಬಾಹುಬಲಿ ಜೈನ ನಿರೂಪಿಸಿದರು. ಬಳಿಕ ಮಂಗಳೂರಿನ ಹೆಜ್ಜೆನಾದ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

> **ರೈತರಿಗೆ ಸಂಬಳವಿಲ್ಲ, ಪಿಂಚಣಿಯಿಲ್ಲ ಎಂಬ ಕಾರಣಕ್ಕೆ ಯಾರೂ ರೈತನಾಗಲು ಬಯಸುವುದಿಲ್ಲ. ಆದರೆ ರೈತರು ಯಾವ ಇಂಜಿನಿಯರ್‌ಗಿಂತಲೂ ಕಡಿಮೆ ಇಲ್ಲ. ಜಮೀನನ್ನು ಸರಿಯಾಗಿ ಬಳಸಿಕೊಂಡು ವಿವಿಧ ಬೆಳೆ, ಹೈನುಗಾರಿಕೆ ಹಾಗೂ ಪಶುಪಾಲನೆ ಮಾಡಿದರೆ ಕೃಷಿಯಲ್ಲೇ ದೊಡ್ಡ ಸಾಧನೆ ಮಾಡಬಹುದು.**
> – **ಕವಿತಾ ಮಿಶ್ರಾ**, ಆದರ್ಶ ರೈತ ಮಹಿಳೆ

---

### ಸಭಾಧ್ಯಕ್ಷರಾದ ಬಳಿಕ ಮೊದಲ ಬಾರಿಗೆ ನರೇಗಲ್ಲಿಗೆ ಆಗಮಿಸಿದ ಜಿ.ಎಸ್. ಪಾಟೀಲರಿಗೆ ಅದ್ದೂರಿ ಸ್ವಾಗತ

# ನಿಮ್ಮ ಪ್ರೀತಿ, ವಿಶ್ವಾಸವೇ ನನ್ನ ರಾಜಕೀಯ ಶಕ್ತಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**
ರೋಣ ಮತಕ್ಷೇತ್ರದ ಜನತೆ, ಅದರಲ್ಲೂ ನರೇಗಲ್ಲ ಭಾಗದ ಜನರು ನೀಡಿದ ಪ್ರೀತಿ, ವಿಶ್ವಾಸ ಹಾಗೂ ಆಶೀರ್ವಾದವೇ ನಾನು ವಿಧಾನಸಭೆಯ ಸಭಾಧ್ಯಕ್ಷನಾಗಿ ಆಯ್ಕೆಯಾಗಲು ಕಾರಣ. ನೀವು ಇಟ್ಟಿರುವ ವಿಶ್ವಾಸಕ್ಕೆ ತಕ್ಕಂತೆ ನಡೆದುಕೊಳ್ಳುವುದು ನನ್ನ ಜವಾಬ್ದಾರಿ. ನಿಮ್ಮ ಋಣವನ್ನು ಎಂದಿಗೂ ಮರೆಯುವುದಿಲ್ಲ ಎಂದು ವಿಧಾನಸಭೆ ಸಭಾಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಸಭಾಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಪ್ರಥಮ ಬಾರಿಗೆ ನರೇಗಲ್ಲ ಪಟ್ಟಣಕ್ಕೆ ಭಾನುವಾರ ಆಗಮಿಸಿದ ಜಿ.ಎಸ್. ಪಾಟೀಲರಿಗೆ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಅದ್ದೂರಿ ಸ್ವಾಗತ ಕೋರಿದರು.



ಪಟ್ಟಣದ ದುರ್ಗಾ ಸರ್ಕಲ್‌ನಲ್ಲಿ ತೆರೆದ ವಾಹನದಲ್ಲಿ ಜನರನ್ನುದ್ದೇಶಿಸಿ ಮಾತನಾಡಿದ ಅವರು, ಸಭಾಧ್ಯಕ್ಷ ಸ್ಥಾನ ದೊರೆತಿರುವುದರಿಂದ ಕ್ಷೇತ್ರದ ಜನರಿಂದ ದೂರವಾಗುವುದಿಲ್ಲ. ಜನಪ್ರತಿನಿಧಿಯಾಗಿ ಕ್ಷೇತ್ರದ ಅಭಿವೃದ್ಧಿಗೆ ಸಂಪೂರ್ಣ ಶಕ್ತಿ ವಿನಿಯೋಗಿಸುವುದಾಗಿ ಭರವಸೆ ನೀಡಿದರು.

ರಸ್ತೆ, ಕುಡಿಯುವ ನೀರು, ನೀರಾವರಿ, ಶಿಕ್ಷಣ, ಆರೋಗ್ಯ ಹಾಗೂ ರೈತರ ಸಮಸ್ಯೆಗಳಿಗೆ ಆದ್ಯತೆ ನೀಡಲಾಗುವುದು. ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿಗೂ ಹೆಚ್ಚಿನ ಗಮನ ಹರಿಸುವುದಾಗಿ ಹೇಳಿದರು.

ಸಭಾಧ್ಯಕ್ಷ ಸ್ಥಾನ ಪಕ್ಷಾತೀತ ಹಾಗೂ ಸಂವಿಧಾನಾತ್ಮಕ ಜವಾಬ್ದಾರಿಯಾಗಿದೆ. ರಾಜ್ಯದ ಎಲ್ಲ ಶಾಸಕರನ್ನು ಸಮಾನವಾಗಿ ಕಾಣುತ್ತಾ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದ ಅವರು, ರೈತರು, ಬಡವರು, ದೀನದಲಿತರು, ಅಲ್ಪಸಂಖ್ಯಾತರು ಸೇರಿದಂತೆ ಎಲ್ಲ ವರ್ಗದ ಜನರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವುದು ತಮ್ಮ ಕರ್ತವ್ಯ ಎಂದರು.

ಪಟ್ಟಣಕ್ಕೆ ದೊರೆತ ಅದ್ದೂರಿ ಸ್ವಾಗತಕ್ಕೆ ಭಾವುಕರಾದ ಪಾಟೀಲ, ಸಾಮಾನ್ಯವಾಗಿ ಬಂದು ಹೋಗೋಣ ಎಂದುಕೊಂಡಿದ್ದೆ. ಆದರೆ ನಿಮ್ಮ ಪ್ರೀತಿ, ಅಭಿಮಾನ ಮತ್ತು ಆತ್ಮೀಯತೆ ನನ್ನನ್ನು ಮತ್ತಷ್ಟು ಭಾವುಕರನ್ನಾಗಿಸಿದೆ. ಇಷ್ಟೊಂದು ಸಂಖ್ಯೆಯಲ್ಲಿ ಸೇರಿ ಸನ್ಮಾನಿಸಿರುವುದು ಜೀವನದ ಮರೆಯಲಾಗದ ಕ್ಷಣ ಎಂದರು.

ಈ ಸಂದರ್ಭದಲ್ಲಿ ಪಾಟೀಲರು ಶ್ರೀ ವೀರಭದ್ರೇಶ್ವರ ಹಾಗೂ ದ್ಯಾಮಮ್ಮ ದೇವಿ ದೇವಸ್ಥಾನಗಳಿಗೆ ಭೇಟಿ ನೀಡಿ ದರ್ಶನ ಪಡೆದರು. ಲಿಂಗೈಕ್ಯ ಗುರು ಅನ್ನದಾನ ಮಹಾಸ್ವಾಮಿಗಳನ್ನು ಸ್ಮರಿಸಿ ಗೌರವ ನಮನ ಸಲ್ಲಿಸಿದರು.

ಸಭಾಧ್ಯಕ್ಷರ ಪ್ರಥಮ ನರೇಗಲ್ಲ ಭೇಟಿ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಪ್ರಮುಖ ರಸ್ತೆಗಳು ಹಾಗೂ ವೃತ್ತಗಳಲ್ಲಿ ಅಭಿನಂದನಾ ಬ್ಯಾನರ್, ಕಟೌಟ್‌ಗಳು ಹಾಗೂ ಫಲಕಗಳು ರಾರಾಜಿಸಿದವು. ಕಾರ್ಯಕರ್ತರು ಜಯಘೋಷ ಮೊಳಗಿಸಿ, ಕ್ರೇನ್ ಮೂಲಕ ಬೃಹತ್ ಹೂಮಾಲೆ ಹಾಕಿ, ಪುಷ್ಪವೃಷ್ಟಿ ಮಾಡಿ ಸ್ವಾಗತಿಸಿದರು. ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಮಹಿಳೆಯರು ಆರತಿ ಬೆಳಗಿ ಶುಭ ಹಾರೈಸಿದರು.

> **ಸಭಾಧ್ಯಕ್ಷ ಸ್ಥಾನದಿಂದ ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಹಿನ್ನಡೆಯಾಗುವುದಿಲ್ಲ. ಬದಲಾಗಿ ರಾಜ್ಯದ ಅತ್ಯುನ್ನತ ಸಾಂವಿಧಾನಿಕ ಸ್ಥಾನಗಳಲ್ಲಿ ಒಂದಾದ ಈ ಜವಾಬ್ದಾರಿಯನ್ನು ಕ್ಷೇತ್ರದ ಅಭಿವೃದ್ಧಿಗೆ ಹೊಸ ಅವಕಾಶವನ್ನಾಗಿ ಬಳಸಿಕೊಳ್ಳುತ್ತೇನೆ.**
> – **ಜಿ.ಎಸ್. ಪಾಟೀಲ,** ವಿಧಾನಸಭೆ ಸಭಾಧ್ಯಕ್ಷ

ಈ ಸಂದರ್ಭದಲ್ಲಿ ಮಿಥುನ ಪಾಟೀಲ, ಡಾ. ಕೆ.ಬಿ. ಧನ್ನೂರ, ಅಕ್ಷಯ ಪಾಟೀಲ, ಎಂ.ಎಸ್. ಧಡೇಸೂರಮಠ, ವಿ.ಬಿ. ಸೋಮನಕಟ್ಟಿಮಠ, ಮೈಲಾರಪ್ಪ ಚಳ್ಳಮರದ, ಎಂ.ಎನ್. ಹುಲಕೋಟಿ, ನಿಂಗನಗೌಡ ಲಕ್ಕನಗೌಡ, ಹನುಮಂತಪ್ಪ ಅಬ್ಬಿಗೇರಿ, ಅಲ್ಲಾಭಕ್ಷ ನದಾಫ್, ಎ.ಎ. ನವಲಗುಂದ, ಸದ್ದಾಂ ನಶೇಖಾನ, ಶೇಖಪ್ಪ ಜುಟ್ಟಲದ, ಶರಣಪ್ಪ ಕುರಿ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

---

# ಗದಗ ಜಿಲ್ಲೆ ಬರಪೀಡಿತ ಘೋಷಿಸಿ; ರೈತರ ಸಾಲ ಮನ್ನಾ ಮಾಡಿ

**ವಿಜಯಸಾಕ್ಷಿ ಸುದ್ದಿ, ಡಂಬಳ**
ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಿ, ರೈತರ ಬೆಳೆ ಸಾಲ ಹಾಗೂ ಸ್ತ್ರೀಶಕ್ತಿ ಸಂಘಗಳ ಸಾಲ ಮನ್ನಾ ಮಾಡಬೇಕು ಎಂದು ಅಖಿಲ ಕರ್ನಾಟಕ ರಾಜ್ಯ ಕಿಸಾನ ಜಾಗೃತಿ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪಗೌಡ ಕರಮಡಿ ಆಗ್ರಹಿಸಿದರು.



ಡಂಬಳ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಸಹಕಾರ ಬ್ಯಾಂಕ್‌ಗಳಿಂದ ರೈತರಿಗೆ ಬಡ್ಡಿರಹಿತ ಬೆಳೆ ಸಾಲ ಒದಗಿಸಬೇಕು. ರಾಷ್ಟ್ರೀಕೃತ ಹಾಗೂ ಸಹಕಾರ ಬ್ಯಾಂಕ್‌ಗಳಲ್ಲಿರುವ ರೈತರ ಬೆಳೆ ಸಾಲವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ಮುಂಗಾರು ಆರಂಭದಲ್ಲಿ ಅಲ್ಪ ಪ್ರಮಾಣದ ಮಳೆಯಾದ ಹಿನ್ನೆಲೆಯಲ್ಲಿ ರೈತರು ಸಾಲ ಮಾಡಿ ಬಿತ್ತನೆ ಕೈಗೊಂಡಿದ್ದರು. ಬಳಿಕ ಮಳೆ ಕೈಕೊಟ್ಟಿದ್ದರಿಂದ ಬೆಳೆಗಳು ಒಣಗಿ ಸಂಪೂರ್ಣ ಹಾನಿಯಾಗಿವೆ. ಬಿತ್ತನೆ ಅವಧಿ ಮುಗಿಯುತ್ತಿದ್ದರೂ ಅಗತ್ಯ ಮಳೆಯಾಗದ ಕಾರಣ ರೈತರು ಜಮೀನು ಹರಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಮಳೆ ಕೊರತೆಯಿಂದ ಬಹುತೇಕ ಕೊಳವೆಬಾವಿಗಳಲ್ಲಿಯೂ ನೀರಿನ ಪ್ರಮಾಣ ಕಡಿಮೆಯಾಗಿದೆ. ಲಭ್ಯವಿರುವ ನೀರಿನಿಂದ ಕೃಷಿ ಮಾಡುವುದು ಕಷ್ಟವಾಗಿದ್ದು, ಡೀಸೆಲ್ ದರ ಹೆಚ್ಚಳದಿಂದ ಟ್ರ್ಯಾಕ್ಟರ್‌ಗಳ ಬಾಡಿಗೆಯೂ ಏರಿಕೆಯಾಗಿದೆ. ಕೃಷಿಗೆ ಅಗತ್ಯವಿರುವ ಬಹುತೇಕ ವಸ್ತುಗಳ ಬೆಲೆ ಹೆಚ್ಚಳದಿಂದ ರೈತರು ಹಾಕಿದ ಬಂಡವಾಳವೂ ವಾಪಸ್ ಪಡೆಯಲಾಗದ ಸ್ಥಿತಿಗೆ ತಲುಪಿದ್ದಾರೆ ಎಂದು ಹೇಳಿದರು. ರೋಣ ಕ್ಷೇತ್ರದಲ್ಲಿ ಈ ಹಿಂದೆ ಬೆಳೆದಿದ್ದ ಕೆಂಪು ಮೆಣಸಿನಕಾಯಿಗೆ ವಿಮಾ ಸೌಲಭ್ಯ ಘೋಷಣೆಯಾಗಿಲ್ಲ. ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಮುಂಡರಗಿ ತಾಲೂಕು ಸೇರಿದಂತೆ ಇಡೀ ಗದಗ ಜಿಲ್ಲೆಯನ್ನು ಬರಪೀಡಿತ ಎಂದು ಘೋಷಿಸಿ ಬೆಳೆ ನಷ್ಟ ಪರಿಹಾರ ನೀಡಬೇಕು. ಕೃಷಿ ಕಾರ್ಮಿಕರಿಗೆ ಬರ ಪರಿಹಾರ ಕಾಮಗಾರಿಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.

ರೈತರ ಸಾಲ ಮನ್ನಾ ಹಾಗೂ ಅಗತ್ಯ ಪರಿಹಾರ ಕಲ್ಪಿಸಲು ಸಂಸದರು, ಉಸ್ತುವಾರಿ ಸಚಿವರು ಹಾಗೂ ಶಾಸಕರು ಸರ್ಕಾರದ ಮೇಲೆ ಒತ್ತಡ ತರಬೇಕು ಎಂದು ಯಲ್ಲಪ್ಪಗೌಡ ಕರಮಡಿ ಒತ್ತಾಯಿಸಿದರು.

---

# ಮೊಳಕೆಯಲ್ಲೇ ಕಮರುತ್ತಿರುವ ಈರುಳ್ಳಿ-ಮೆಣಸಿನಕಾಯಿ ಬೆಳೆ

**ವಿಜಯಸಾಕ್ಷಿ ಸುದ್ದಿ, ಗದಗ**
ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಭೂಮಿಯಲ್ಲಿ ತೇವಾಂಶದ ಕೊರತೆ ಉಂಟಾಗಿ ತಿಮ್ಮಾಪೂರ, ಹರ್ಲಾಪೂರ ಸೇರಿದಂತೆ ವಿವಿಧ ಭಾಗಗಳಲ್ಲಿ ಈರುಳ್ಳಿ ಹಾಗೂ ಮೆಣಸಿನ ಕಾಯಿ ಬೆಳೆಗಳು ಮುಟುಗಿ ರೋಗಕ್ಕೆ ತುತ್ತಾಗುತ್ತಿವೆ. ಮೊಳಕೆ ಹಂತದಲ್ಲೇ ಬೆಳೆಗಳು ಭೂಮಿಯಿಂದ ಮೇಲೆ ಬರಲಾಗದೆ ಕಮರಿ, ಕೊಳೆತು ಹೋಗುತ್ತಿದ್ದು ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತನೆಗಾಗಿ ಸಾವಿರಾರು ರೂಪಾಯಿ ಮೌಲ್ಯದ ಬೀಜ, ಗೊಬ್ಬರ ಹಾಗೂ ಕೂಲಿ ವೆಚ್ಚ ಮಾಡಿದ ರೈತರಿಗೆ ಬೆಳೆ ಕೈಕೊಟ್ಟಿರುವುದರಿಂದ ಆರ್ಥಿಕ ಹೊರೆ ಮತ್ತಷ್ಟು ಹೆಚ್ಚಾಗಿದೆ. ಸಾಲ ಮಾಡಿ ಬಿತ್ತನೆ ಮಾಡಿರುವ ರೈತರು ಇದೀಗ ಸಾಲ ತೀರಿಸುವುದು ಹೇಗೆ ಎಂಬ ಚಿಂತೆಯಲ್ಲಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ತಿಳಿಸಿದ್ದಾರೆ.



ಜಿಲ್ಲಾಡಳಿತ, ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ತಕ್ಷಣವೇ ರೈತರ ಹೊಲಗಳಿಗೆ ಭೇಟಿ ನೀಡಿ ಬೆಳೆಗಳಿಗೆ ತಗುಲಿರುವ ರೋಗದ ಕುರಿತು ತಜ್ಞರಿಂದ ಅಧ್ಯಯನ ನಡೆಸಬೇಕು. ಬೆಳೆ ನಷ್ಟದ ಸಮೀಕ್ಷೆ ಕೈಗೊಂಡು ರೈತರಿಗೆ ಸೂಕ್ತ ಪರಿಹಾರ ಹಾಗೂ ಬೆಳೆ ವಿಮೆ ದೊರಕಿಸಲು ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘ ಒತ್ತಾಯಿಸಿದೆ. ಮುಂದಿನ ಬಿತ್ತನೆಗೆ ಗುಣಮಟ್ಟದ ಬೀಜ, ಅಗತ್ಯ ಔಷಧ ಹಾಗೂ ತಾಂತ್ರಿಕ ಮಾರ್ಗದರ್ಶನ ಒದಗಿಸಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಾಗೂ ಜಿಲ್ಲಾಡಳಿತ ರೈತರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಯಲ್ಲಪ್ಪ ಎಚ್. ಬಾಬರಿ ಎಚ್ಚರಿಸಿದ್ದಾರೆ.

> **ಭೂಮಿಯಲ್ಲಿ ತೇವಾಂಶ ಇಲ್ಲದೆ ಈರುಳ್ಳಿ ಮತ್ತು ಮೆಣಸಿನಕಾಯಿ ಬೆಳೆಗಳು ಮುಟುಗಿ ರೋಗಕ್ಕೆ ತುತ್ತಾಗಿ, ಮೇಲೆ ಬರಲಾಗದೆ ಭೂಮಿಯಲ್ಲೇ ಕಮರಿ ಹೋಗುತ್ತಿವೆ. ರೈತರ ಕಣ್ಣೆದುರೇ ಬೆಳೆ ಸಾಯುತ್ತಿದೆ. ಬಿತ್ತನೆಗಾಗಿ ಮಾಡಿದ ಸಾಲ ಹೇಗೆ ತೀರಿಸಬೇಕು ಎಂಬ ಚಿಂತೆಯಲ್ಲಿ ರೈತರಿದ್ದಾರೆ. ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ ತಜ್ಞರ ತಂಡದಿಂದ ಸಮೀಕ್ಷೆ ನಡೆಸಿ ಪರಿಹಾರ ಒದಗಿಸಬೇಕು.**
> – **ಯಲ್ಲಪ್ಪ ಎಚ್. ಬಾಬರಿ,** ಜಿಲ್ಲಾಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ

---

### ಕಾಂಗ್ರೆಸ್ ವಾರ್ಡ್‌ಗಳಿಗೆ ₹1 ಕೋಟಿ, ಬಿಜೆಪಿ ವಾರ್ಡ್‌ಗಳಿಗೆ ₹50 ಲಕ್ಷ

# ಅನುದಾನ ಹಂಚಿಕೆಯಲ್ಲಿ ತಾರತಮ್ಯ ಆರೋಪ

**ವಿಜಯಸಾಕ್ಷಿ ಸುದ್ದಿ, ಗದಗ**
ಗದಗ-ಬೆಟಗೇರಿ ಅವಳಿ ನಗರದ 35 ವಾರ್ಡ್‌ಗಳಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂದು ಬಿಜೆಪಿ ಮುಖಂಡ ರಾಘವೇಂದ್ರ ಯಳವತ್ತಿ ಆರೋಪಿಸಿದ್ದಾರೆ.



2025-26ನೇ ಸಾಲಿನ ಯೋಜನೆಯಡಿ ಕಾಂಗ್ರೆಸ್ ಸದಸ್ಯರು ಪ್ರತಿನಿಧಿಸುವ ವಾರ್ಡ್‌ಗಳಿಗೆ ಹೆಚ್ಚಿನ ಅನುದಾನ ನೀಡಿ, ಬಿಜೆಪಿ ಸದಸ್ಯರ ವಾರ್ಡ್‌ಗಳನ್ನು ನಿರ್ಲಕ್ಷಿಸಲಾಗುತ್ತಿದೆ.

ಇದರಿಂದ ಬಿಜೆಪಿ ಸದಸ್ಯರು ಹಾಗೂ ಆಯಾ ವಾರ್ಡ್‌ಗಳ ಸಾರ್ವಜನಿಕರಲ್ಲಿ ಅಸಮಾಧಾನ ಮೂಡಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶಾಲ ಭೌಗೋಳಿಕ ವ್ಯಾಪ್ತಿಯನ್ನು ಹೊಂದಿರುವ ಬೆಟಗೇರಿ ಭಾಗದ 7ನೇ ವಾರ್ಡ್‌ನಲ್ಲಿ 16ಕ್ಕೂ ಹೆಚ್ಚು ಓಣಿಗಳು, ಐದು ಕೊಳಚೆ ಪ್ರದೇಶಗಳು, ಪಂಚಲಕ್ಷ್ಮೀ ಬಡಾವಣೆ, ರಾಮಕೃಷ್ಣ ಬಡಾವಣೆ ಸೇರಿದಂತೆ ಹೊಸ ತರಕಾರಿ ಮಾರುಕಟ್ಟೆ ಹಾಗೂ ಬೆಟಗೇರಿ ಬಸ್ ನಿಲ್ದಾಣವೂ ಬರುತ್ತವೆ. ಇಂತಹ ವಿಶಾಲ ವಾರ್ಡ್‌ನ ಅಭಿವೃದ್ಧಿಗೆ ಅಗತ್ಯವಾದಷ್ಟು ಆರ್ಥಿಕ ಸಂಪನ್ಮೂಲ ದೊರೆಯುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಕಾಂಗ್ರೆಸ್ ಸದಸ್ಯರ ವಾರ್ಡ್‌ಗಳಿಗೆ ತಲಾ ₹1 ಕೋಟಿ ಅನುದಾನ ನೀಡಲಾಗುತ್ತಿದ್ದರೆ,

ಬಿಜೆಪಿ ಸದಸ್ಯರ ವಾರ್ಡ್‌ಗಳಿಗೆ ₹50 ಲಕ್ಷ ಮಾತ್ರ ನೀಡಲಾಗುತ್ತಿದೆ. ಅಲ್ಲದೆ, ಬಿಜೆಪಿ ಸದಸ್ಯರ ವಾರ್ಡ್‌ಗಳಲ್ಲಿ ಕಾಮಗಾರಿಗಳ ಅಂದಾಜು ಪತ್ರಿಕೆ ಸಿದ್ಧಪಡಿಸುವ ಜವಾಬ್ದಾರಿಯನ್ನೂ ಚುನಾಯಿತ ಬಿಜೆಪಿ ಸದಸ್ಯರಿಗೆ ನೀಡದೆ ಕಾಂಗ್ರೆಸ್ ಮುಖಂಡರಿಗೆ ವಹಿಸಿರುವುದು ಖಂಡನೀಯ ಎಂದು ಯಳವತ್ತಿ ಹೇಳಿದ್ದಾರೆ.

ಈ ಹಿಂದೆಯೂ ವಿವಿಧ ಇಲಾಖೆಗಳ ಅನುದಾನ ಹಂಚಿಕೆ ಸಂದರ್ಭದಲ್ಲಿ ಬಿಜೆಪಿ ಸದಸ್ಯರ ವಾರ್ಡ್‌ಗಳನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿರುವ ಅವರು, ನಗರಸಭೆಯಲ್ಲಿ ಬಿಜೆಪಿ ಆಡಳಿತವಿದ್ದಾಗ ಪಕ್ಷಭೇದವಿಲ್ಲದೆ ಕಾಂಗ್ರೆಸ್ ಹಾಗೂ ಬಿಜೆಪಿ ಸದಸ್ಯರ ವಾರ್ಡ್‌ಗಳಿಗೆ ಸಮಾನವಾಗಿ ಅನುದಾನ ನೀಡಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿತ್ತು ಎಂದು ತಿಳಿಸಿದ್ದಾರೆ.

ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮುಂದುವರಿದರೆ ಬಿಜೆಪಿ ಸದಸ್ಯರ ವಾರ್ಡ್‌ಗಳಲ್ಲಿನ ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಕಷ್ಟವಾಗಲಿದೆ. ಶಾಸಕರು ಕ್ಷೇತ್ರದ ಎಲ್ಲ ವಾರ್ಡ್‌ಗಳನ್ನು ಸಮಾನವಾಗಿ ಪರಿಗಣಿಸಿ ಅಭಿವೃದ್ಧಿಗೆ ಅನುದಾನ ನೀಡಬೇಕು.

ಪಕ್ಷಭೇದ ಮರೆತು ಬಿಜೆಪಿ ಸದಸ್ಯರನ್ನು ವಿಶ್ವಾಸಕ್ಕೆ ಪಡೆದು ಅಭಿವೃದ್ಧಿ ಕಾರ್ಯಗಳಿಗೆ ಸಹಕರಿಸಬೇಕು ಎಂದು ರಾಘವೇಂದ್ರ ಯಳವತ್ತಿ ಆಗ್ರಹಿಸಿದ್ದಾರೆ.

---

# ದೇವಸ್ಥಾನಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**
ಮಠ, ಮಂದಿರ ಹಾಗೂ ದೇವಸ್ಥಾನಗಳು ಭಾರತದ ಹೆಮ್ಮೆಯ ಸಂಸ್ಕೃತಿಯ ಪ್ರತೀಕಗಳಾಗಿವೆ. ಅವುಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಹಿರಿಯರ ಮಾರ್ಗದರ್ಶನದೊಂದಿಗೆ ಯುವಕರ ಸಹಕಾರ ಮತ್ತು ಸಾಮರ್ಥ್ಯವೂ ಅಗತ್ಯ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ಇತಿಹಾಸ ಪ್ರಸಿದ್ಧ ಮೂಕ ಬಸವೇಶ್ವರ ದೇವಸ್ಥಾನದ ನೂತನ ದ್ವಾರಬಾಗಿಲು ಉದ್ಘಾಟಿಸಿ, ದೇವಸ್ಥಾನ ಭಕ್ತರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ದೇವಸ್ಥಾನ ನಿರ್ಮಾಣ ಮಾಡುವುದು ಸುಲಭವಾದರೂ ಅದರ ನಿರ್ವಹಣೆ ಅಷ್ಟೇ ಮುಖ್ಯ. ದೇವಸ್ಥಾನಗಳಲ್ಲಿ ನಿತ್ಯ ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳು ನಿರಂತರವಾಗಿ ನಡೆಯಬೇಕು. ಮರು ನಿರ್ಮಾಣಗೊಂಡಿರುವ ಮೂಕ ಬಸವೇಶ್ವರ ದೇವಸ್ಥಾನದ ಅಭಿವೃದ್ಧಿಗೆ ಅಗತ್ಯ ಅನುದಾನ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ದಾನಿಗಳ ಸಹಕಾರದಿಂದ ದೇವಸ್ಥಾನಗಳ ಜೀರ್ಣೋದ್ಧಾರ ನಡೆಯುವುದರಿಂದ ಸಮಾಜದ ಎಲ್ಲರೂ ಒಗ್ಗೂಡುವಂತಾಗುತ್ತದೆ. ದೇವಸ್ಥಾನದ ಜೊತೆಗೆ ನೂತನ ದ್ವಾರಬಾಗಿಲು ನಿರ್ಮಿಸಿರುವುದು ಶ್ಲಾಘನೀಯ ಕಾರ್ಯ. ಮುಂದಿನ ದಿನಗಳಲ್ಲಿ ಈ ಭಾಗದ ರಸ್ತೆ ಅಭಿವೃದ್ಧಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ನಿವೃತ್ತ ಶಿಕ್ಷಕ ಎಸ್.ಎಫ್. ಆದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಮಹೇಶ ಲಿಂಬಯ್ಯಸ್ವಾಮಿಮಠ, ಪುರಸಭೆ ಮಾಜಿ ಸದಸ್ಯರಾದ ಪ್ರವೀಣ ಬಾಳಿಕಾಯಿ, ಶಂಕ್ರಮ್ಮ ಕರಡಿ, ಮೈಲಾರಗೌಡ ನರಸಮ್ಮನವರ, ರಮೇಶ ಹಾಳದೋಟದ, ಗಂಗಪ್ಪ ದುರಗಣ್ಣವರ, ಶಿವಣ್ಣ ನರ್ತಿ, ಶಿವಯೋಗಿ ಹಳ್ಯಾಳ, ಫಕ್ಕೀರೇಶ ಕಿವುಡನವರ, ಪ್ರಶಾಂತ ಹಿರೇಮಠ, ಗಂಗಾಧರ ಮೆಣಸಿನಕಾಯಿ, ಮಹೇಶ ಬಡ್ನಿ, ಅಶೋಕ ಕನಕವಾಡ, ಬಸಯ್ಯ ದೊಡ್ಡಯ್ಯಪ್ಪನವರ, ಮುಕ್ತಾ ಶಿಳ್ಳಿನ, ಮಂಜುಳಾ ಹೂಲಿಕಟ್ಟಿ, ಸುನೀತಾ ಮನಕವಾಡ, ಲಲಿತಾ ದೊಡ್ಡಯ್ಯಪ್ಪನವರ, ಲಲಿತಾ ಚಿಕೆನಕೊಪ್ಪ, ವಿಶಾಲಾ ಮುಳಗುಂದ, ಶಕುಂತಲಾ ಮುಳಗುಂದ ಸೇರಿದಂತೆ ಭಕ್ತರು, ಓಣಿಯ ಹಿರಿಯರು, ಯುವಕರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು. ಜೆ.ಎಸ್. ರಾಮಶೆಟ್ರ ನಿರೂಪಿಸಿದರು. ಕೆ.ಓ. ಹೂಲಿಕಟ್ಟಿ ವಂದಿಸಿದರು.

ಇತಿಹಾಸ ಪ್ರಸಿದ್ಧ ಶ್ರೀ ಮೂಕ ಬಸವೇಶ್ವರ ದೇವಸ್ಥಾನದಲ್ಲಿ ಸೋಮವಾರ ಬೆಳಗ್ಗೆ 10 ಗಂಟೆಗೆ ಗಣೇಶ ಹಾಗೂ ಆಂಜನೇಯ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಮತ್ತು ದೇವಸ್ಥಾನದ ಕಳಸಾರೋಹಣ ಕಾರ್ಯಕ್ರಮ ಹೋಮ, ಹವನ ಹಾಗೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ನಡೆಯಲಿದೆ. ಲಕ್ಷ್ಮೇಶ್ವರ ಕರೆವಾಡಿಮಠದ ಮಳೆಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದು, ಗಂಜಿಗಟ್ಟಿ ಚರಮೂರ್ತೇಶ್ವರಮಠದ ಡಾ. ವೈಜನಾಥ ಶಿವಲಿಂಗೇಶ್ವರ ಶಿವಾಚಾರ್ಯರು ಹಾಗೂ ಹೂವಿನ ಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ನೇತೃತ್ವ ವಹಿಸುವರು. ಅನೇಕ ಮುಖಂಡರು, ಹಿರಿಯರು ಹಾಗೂ ಗಣ್ಯರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಸಂಘಟಕರು ತಿಳಿಸಿದ್ದಾರೆ.

---

### 25 ಮಂದಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೆ ಆಯ್ಕೆ | 30ಕ್ಕೂ ಹೆಚ್ಚು ಮಂದಿಯಲ್ಲಿ ರಕ್ತದೊತ್ತಡ ಪತ್ತೆ

# ಬಾಲೆಹೊಸೂರಿನಲ್ಲಿ ಉಚಿತ ಆರೋಗ್ಯ ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**
ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಲಕ್ಷ್ಮೇಶ್ವರ ತಾಲೂಕಿನ ಬಾಲೇಹೊಸೂರ ಗ್ರಾಮದಲ್ಲಿ ಭಾನುವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.




ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಬಿ.ಸಿ. ಟ್ರಸ್ಟ್) ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕು, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ ಹಾಗೂ ನಾರಾಯಣ ಹೃದಯಾಲಯ, ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಶಿಬಿರ ನಡೆಯಿತು. ಡಾ. ಪ್ರಕಾಶ ಹೊಸಮನಿ ಅವರ ತಂಡ, ನಾರಾಯಣ ಹೃದಯಾಲಯದ ವೈದ್ಯರು ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕರ್ತರ ಸಹಯೋಗ ದಲ್ಲಿ ನಡೆದ ಶಿಬಿರದಲ್ಲಿ 400ಕ್ಕೂ ಹೆಚ್ಚು ಜನರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು. ಇ.ಸಿ.ಜಿ., ಹೃದಯ ಸ್ಕ್ಯಾನ್, ರಕ್ತ ಪರೀಕ್ಷೆ ಸೇರಿದಂತೆ ವಿವಿಧ ವೈದ್ಯಕೀಯ ಪರೀಕ್ಷೆಗಳನ್ನು ಉಚಿತವಾಗಿ ನಡೆಸಿ, ಅಗತ್ಯವಿದ್ದವರಿಗೆ ಔಷಧ ವಿತರಿಸಲಾಯಿತು.

ಹೃದಯ, ಸ್ತ್ರೀರೋಗ, ಚರ್ಮ ಹಾಗೂ ನೇತ್ರ ತಜ್ಞರು ಶಿಬಿರದಲ್ಲಿ ಪಾಲ್ಗೊಂಡು ಗ್ರಾಮಸ್ಥರನ್ನು ತಪಾಸಣೆ ನಡೆಸಿದರು. ಸುಮಾರು 25 ಮಂದಿಯನ್ನು ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಗಿದೆ. 10ಕ್ಕೂ ಹೆಚ್ಚು ಮಂದಿಯಲ್ಲಿ ಹೊಸದಾಗಿ ಸಕ್ಕರೆ ಕಾಯಿಲೆ ಹಾಗೂ 30ಕ್ಕೂ ಹೆಚ್ಚು ಮಂದಿಯಲ್ಲಿ ರಕ್ತದೊತ್ತಡ ಪತ್ತೆಯಾಗಿದ್ದು, ಸೂಕ್ತ ಚಿಕಿತ್ಸೆಗೆ ಸಲಹೆ ನೀಡಲಾಯಿತು.

ಬಾಲೇಹೊಸೂರ ಮೂಲ ಆರೋಗ್ಯ ಸೇವೆಗಳಿಂದ ವಂಚಿತವಾಗಿರುವ ಹಿನ್ನೆಲೆಯಲ್ಲಿ ಗ್ರಾಮವನ್ನು ಆಯ್ಕೆ ಮಾಡಿಕೊಂಡು ವೈದ್ಯಕೀಯ ತಂಡ ಸೇವೆ ನೀಡಿದೆ. ವೈದ್ಯರು ಗ್ರಾಮೀಣ ಭಾಗದ ಜನರ ಆರೋಗ್ಯ ಸಮಸ್ಯೆಗಳನ್ನು ಅರಿತು ಮಾನವೀಯ ಸ್ಪಂದನೆಯೊಂದಿಗೆ ಚಿಕಿತ್ಸೆ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಡಾ. ಪ್ರಕಾಶ ಹೊಸಮನಿ ಹೇಳಿದರು. ಗ್ರಾಮದ ನಾಗಯ್ಯ ಮಠಪತಿ, ಫಕ್ಕೀರೇಶ ಮ್ಯಾಟಣ್ಣವರ ಮಾತನಾಡಿ, ಜನರ ಆರೋಗ್ಯದ ದೃಷ್ಟಿಯಿಂದ ವೈದ್ಯರು ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯವರು ಕೈಗೊಂಡಿರುವ ಸೇವಾ ಕಾರ್ಯ ಶ್ಲಾಘನೀಯ ಎಂದರು. ಅಧ್ಯಕ್ಷತೆ ವಹಿಸಿದ್ದ ದೇವಿಂದ್ರಪ್ಪ ಬಡಿಗೇರ ಶುಭ ಹಾರೈಸಿ, ಮುಂದೆಯೂ ಇಂತಹ ಸೇವಾ ಕಾರ್ಯಗಳಿಗೆ ಸಹಕಾರ ನೀಡುವುದಾಗಿ ತಿಳಿಸಿದರು.

ಸ್ಥಳೀಯ ವೈದ್ಯರಾದ ಡಾ. ಡಿ.ಡಿ. ಬಡೇಖಾನ, ಬಸವರಾಜ ಹನುಮರೆಡ್ಡಿ, ಯಲ್ಲಪ್ಪ ಸೂರಣಗಿ, ಶಾಮಣ್ಣ ಕಡೇಮನಿ, ನಿಂಗಪ್ಪ ಪ್ಯಾಟಿ, ಶಿವಣ್ಣ ಕಬ್ಬೇರ, ಡಾ. ಸಿಂಧು, ಡಾ. ಒವೈಸಿ, ಡಾ. ಸೋನಲ್ ಮೆರವಾಡೆ, ಡಾ. ಬಸಲಿಂಗಪ್ಪ, ಡಾ. ಜ್ಯೋತಿ, ಡಾ. ತನೋಜ್, ಡಾ. ಶ್ರೀವತ್ಸ, ಸಮರ್ಥ ಹವಾಲ್ದಾರ ಸೇರಿದಂತೆ ಆಶಾ ಕಾರ್ಯಕರ್ತೆಯರು, ಗ್ರಾಮದ ಗುರು-ಹಿರಿಯರು ಹಾಗೂ ಗಣ್ಯರು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka